ಸಂಪುಟ : 9 ಸಂಚಿಕೆ 85 ಪುಟ : 4 ಬೆಲೆ: 3.00 ಶನಿವಾರ ಮೇ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 85 Pages : 4 Price : 3.00 Saturday May 4 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಿಎಂ ಸಿದ್ದರಾಮಯ್ಯ ಅವರ ಬುಡ ಅಲ್ಲಾಡುತ್ತಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆಯಲ್ಲಿ ಚುನಾವಣೆಯಲ್ಲಿ ಹೆಚ್ಚಿನ ಮತ ಬಾರದಿದ್ದರೆ ತಮ್ಮ ಕುರ್ಚಿ ಹೋಗುತ್ತದೆ ಎಂಬ ಆತಂಕದಿಂದ. ಸಿಎಂ ಸಿದ್ದರಾಮಯ್ಯ ಬುಡ ಅಲ್ಲಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ– ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಗದಗ ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಗ್ಯಾರಂಟಿಯಿಂದ ಬಿಜೆಪಿ ಬುಡ ಅಲ್ಲಾಡುತ್ತಿದೆ ಎಂಬ ಸಿಎಂ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಈಗ ಸಿದ್ದರಾಮಯ್ಯ ಅವರ ಬುಡವೇ ಅಲ್ಲಾಡುತ್ತಿದೆ. ಚುನಾವಣೆಯಲ್ಲಿ ಮತ ಹೆಚ್ಚಿಗೆ ಸಿಗದಿದ್ದರೆ ಮುಂದುವರಿಕೆ ಕಷ್ಟ ಅಂತಾ ಅವರೇ ಹೇಳಿದ್ದಾರೆ. ಮತ್ತೊಂದೆಡೆ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗೇ ಆಗುತ್ತೇನೆ ಎಂದು ಹೇಳಿದ್ದಾರೆ. ನಾನು ಸಿಎಂ ಆಗದಿದ್ರೆ ಒಕ್ಕಲಿಗರು ನಿರಾಸೆ ಆಗ್ತಾರೆ ಅಂದಿದ್ದಾರೆ. ಅವರಿಗೆ ಅವರೇ ಉತ್ತರ ಕೊಟ್ಟುಕೊಳ್ಳುತ್ತಿದ್ದಾರೆ. ನಾವು ಉತ್ತರ ಕೊಡುವ ಅವಶ್ಯಕತೆ ಇಲ್ಲ ಎಂದರು.

ಪ್ರಕೋಷ್ಠಗಳ ಸಭೆ ನಡೆದಿದೆ. ಎಲ್ಲ ವೃತ್ತಿ ಬಾಂಧವರ ವಿಶ್ವಾಸ ಗಳಿಸಬೇಕಿದೆ. ಚುನಾವಣೆಯಲ್ಲಿ ಗೆಲುವು ಎಷ್ಟು ಮುಖ್ಯವೋ, ಎಲ್ಲ ಸಮುದಾಯ, ವೃತ್ತಿ ಬಾಂಧವರ ಮತಗಳು ಅಷ್ಟೇ ಮುಖ್ಯ. ಆ ಹಿನ್ನೆಲೆಯಲ್ಲಿ ಸಭೆ ಕರೆದಿದ್ದೆವು. ಈಗಾಗಲೆ ಪ್ರಕೋಷ್ಠಗಳು ಕೆಲಸ ಮಾಡುತ್ತಿವೆ. ಇನ್ನೂ ಹೆಚ್ಚಿನ ವೃತ್ತಿ ಬಾಂಧವರನ್ನು ಸಂಪರ್ಕ ಮಾಡಿ ಕೆಲಸ ಮಾಡಲು ತೀರ್ಮಾನಿಸಲಾಗಿದೆ. ಎಲ್ಲ ಸಮುದಾಯವನ್ನು ಒಟ್ಟಿಗೆ ತೆಗೆದುಕೊಂಡು ಹೋಗುವ ಪ್ರಕ್ರಿಯೆ ಇದಾಗಿದೆ ಎಂದರು.

ಪ್ರಜ್ವಲ್ ಪ್ರಕರಣ ಮುಜುಗರ ತಪ್ಪಿಸಲು ಮೋದಿ ಅವರು ರಾಜ್ಯ ಪ್ರವಾಸ ರದ್ದು ಮಾಡಿದ್ದಾರೆ ಎಂಬ ರಾಹುಲ್ ಗಾಂಧಿ ಹೇಳಿಕೆಗೆ ಬಸವರಾಜ ಬೊಮ್ಮಾಯಿ ಗರಂ ಆದರು. ಮೋದಿ ಅವರು ರಾಜ್ಯದಲ್ಲಿ ಎರಡು ದಿನ ಪ್ರವಾಸ ಮಾಡಿದ್ದಾರೆ. ಪ್ರಜ್ವಲ್ ಪ್ರಕರಣ ಆದ ಮೇಲೆಯೆ ಎರಡು ದಿನ ಬಂದು ಹೋಗಿದ್ದಾರೆ. ರಾಹುಲ್ ಗಾಂಧಿಯವರ ಯೋಚನಾ ಶಕ್ತಿಯೇ ಅಷ್ಟಿದೆ, ನಾವೇನು ಮಾಡೋಕಾಗಲ್ಲ ಎಂದರು. ಇನ್ನು ಗ್ಯಾರಂಟಿ ರದ್ದು ಬಗ್ಗೆ, ಮತ ಹಾಕದಿದ್ದರೆ ಕರೆಂಟ್ ಕಟ್ ಮಾಡ್ತೇವಿ ಅಂತಾ ಅವರ ಶಾಸಕರು ಹೇಳುತ್ತಿದ್ದಾರೆ. ಕಾಂಗ್ರೆಸ್ ನವರ ಬಣ್ಣ ಈಗ ಹೊರ ಬೀಳುತ್ತಿದೆ ಎಂದರು.

ಈ ಸಂದರ್ಭದಲ್ಲಿ ಶಾಸಕ ಎಸ್‌ವಿ. ಸಂಕನೂರು, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.



ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಅಬ್ದುಲ್ ಅಜೀಂ ಅವರು ನೇಹಾ ಹಿರೇಮಠ ಅವರ ಮನೆಗೆ ಶುಕ್ರವಾರ ಭೇಟಿ ನೀಡಿ, ನೇಹಾ ಹಿರೇಮಠ ಅವರ ತಂದೆ–ತಾಯಿ ಹಾಗೂ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

### ಲಕ್ಷ್ಮೇಶ್ವರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಪರ ರೋಡ್ ಶೋನಲ್ಲಿ ವಿನಯ ಕುಲಕರ್ಣಿ

# ದೇಶಕ್ಕೆ ಕಾಂಗ್ರೆಸ್‌ನ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾವನಾತ್ಮಕ ಸಂಗತಿಗಳನ್ನು ಮುಂದಿಟ್ಟುಕೊಂಡು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿ ಹತ್ತು ವರ್ಷಗಳಿಂದ ನೀಡಿದ ಭರವಸೆ ಈಡೇರಿಸಲಿಲ್ಲ. ರೈತರ ಭಾವನೆಗಳಿಗೆ ಸ್ಪಂದಿಸಲಿಲ್ಲ. ಚುನಾವಣೆ ಸಂದರ್ಭದಲ್ಲಿ ಜಾತಿ, ಧರ್ಮದ ಆಧಾರದ ಮೇಲೆ ಮತ ಕೇಳುವ ಬಿಜೆಪಿಗೆ ಈ ಬಾರಿ ತಕ್ಕ ಪಾಠ ಕಲಿಸಬೇಕು ಎಂದು ಮಾಜಿ ಸಚಿವ, ಶಾಸಕ, ಕೆಪಿಸಿಸಿ ಕಾರ್ಯಾಧ್ಯಕ್ಷ ವಿನಯ ಕುಲಕರ್ಣಿ ಹೇಳಿದರು.

ಅವರು ಪಟ್ಟಣದಲ್ಲಿ ಶುಕ್ರವಾರ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ತವರು ನೆಲದಲ್ಲಿ ಹಮ್ಮಿಕೊಂಡಿದ್ದ ರೋಡ್ ಶೋನಲ್ಲಿ ಪಾಲ್ಗೊಂಡು ಮಾತನಾಡಿದರು.

ಕಾಂಗ್ರೆಸ್ ಪಕ್ಷ ವಿಶ್ವಗುರು ಬಸವಣ್ಣನವರ ಆದರ್ಶಗಳನ್ನು ಪಾಲಿಸುತ್ತ ಬಂದಿದೆ. ಎಲ್ಲರನ್ನೂ ಸಮಾನತೆಯಿಂದ ಕಾಣುವ ಕಾಂಗ್ರೆಸ್ ಈ ದೇಶಕ್ಕೆ ನೀಡಿದ ಕೊಡುಗೆ ಅಪಾರ. ಬಿಜೆಪಿ ದೇಶದ ಪ್ರತಿಯೊಬ್ಬರಿಗೂ ಸ್ವಿಸ್ ಬ್ಯಾಂಕ್‌ನ ಹಣ ಜಮಾ ಮಾಡುವುದಾಗಿ ಹೇಳಿತು. ಜನರು ನಂಬಿ ಜನ್ ಧನ್ ಖಾತೆ ತೆರೆದರು. ಪೇಸಿಎಂ ಖ್ಯಾತಿಯ ಬಸವರಾಜ ಬೊಮ್ಮಾಯಿಯವರನ್ನು ತಿರಸ್ಕರಿಸಿ, ನಿಮ್ಮ ಮನೆಯ ಮಗನನ್ನು ಆಯ್ಕೆ ಮಾಡಿ ಕಳಿಸಿ ಕ್ಷೇತ್ರದ ಅಭಿವೃದ್ಧಿಗೆ ಕೈಜೋಡಿಸಿ ಎಂದು ಮನವಿ ಮಾಡಿದರು.

ವಿ.ಪ ಮುಖ್ಯ ಸಚೇತಕ ಸಲೀಂ ಅಹ್ಮದ್ ಮಾತನಾಡಿ, ಸದಾ ಧರ್ಮದ ಮೇಲೆ ವಿಶ್ವಾಸವಿಟ್ಟ ಕಾಂಗ್ರೆಸ್ ಪಕ್ಷ ದೇಶವನ್ನು ಸರ್ವ ಜನಾಂಗದ ಶಾಂತಿಯ ತೋಟವನ್ನಾಗಿಸುತ್ತಿದೆ. ಈ ಹಿನ್ನೆಲೆಯಲ್ಲಿ ನಮ್ಮ ಪಕ್ಷದ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಗೆಲ್ಲಿಸಬೇಕು ಎಂದರು.




ಇದಕ್ಕೂ ಮುನ್ನ ಪಟ್ಟಣದ ಶ್ರೀ ಸೋಮೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ರೋಡ್ ಶೋಗೆ ಚಾಲನೆ ನೀಡಲಾಯಿತು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ದೂದ್ ಫೀರಾಂ ದರ್ಗಾವರೆಗೆ ಸಾಗಿ ಬಂದಿತು. ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ಸಯ್ಯದ್ ಅಜ್ಜಿಂಫೀರ್ ಖಾದ್ರಿ, ರಾಮಕೃಷ್ಣ ದೊಡ್ಡಮನಿ, ಜಿ.ಎಸ್. ಗಡ್ಡದೇವರಮಠ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಗುರುನಾಥ ದಾನಪ್ಪನವರ, ಚನ್ನಪ್ಪ ಜಗಲಿ, ಎಸ್.ಪಿ. ಬಳಿಗಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಜಿ.ಆರ್. ಕೊಪ್ಪದ, ಅಮರೇಶ ತೆಂಬದಮನಿ, ಫಕ್ಕೀರೇಶ ಮ್ಯಾಟಣ್ಣನವರ, ಸೋಮಣ್ಣ ಬೆಟಗೇರಿ, ವಿರೂಪಾಕ್ಷಪ್ಪ ಪಡಗೇರಿ, ಪದ್ಮರಾಜ ಪಾಟೀಲ, ರಾಜೀವ ಕುಂಬಿ, ದಾದಾಪೀರ ಮುಚ್ಚಾಲೆ, ರಾಮಣ್ಣ ಅಡಗಿಮನಿ, ಸರ್ಫರಾಜ ಸೂರಣಗಿ, ನೀಲಪ್ಪ ಶೆರಸೂರಿ, ಶಿವನಗೌಡ ಪಾಟೀಲ, ಜಯಕ್ಕ ಕಳ್ಳಿ, ಭಾಗ್ಯಶ್ರೀ ಬಾಬಣ್ಣ, ಮಂಜುನಾಥ ಘಂಟಿ ಸೇರಿ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ತಮ್ಮ ಮಧ್ಯೆ ಇದ್ದು ಸೇವೆ ಮಾಡಬೇಕೆಂಬುದು ನನ್ನ ಅಪೇಕ್ಷೆ. ಈ ಕಾರಣಕ್ಕೆ ಕಾಂಗ್ರೆಸ್ ಪಕ್ಷ ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಅವಕಾಶ ನೀಡಿದೆ. ಕ್ಷೇತ್ರದ ಮತದಾರರ ಭಾವನೆಗಳಿಗೆ ಸದಾ ಸ್ಪಂದಿಸುವೆ. ಪಕ್ಷ ಪ್ರತಿನಿಧಿಯಾದ ನನ್ನನ್ನು ಈ ಬಾರಿ ಆಶೀರ್ವದಿಸಿ ಎಂದು ಮನವಿ ಮಾಡಿದರು.



### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಮಾಹಿತಿ


# ಮೇ 14ರಿಂದ ಮಲಪ್ರಭಾ ಜಲಾಶಯದಿಂದ ನೀರು

■ ವಿಜಯಸಾಕ್ಷಿ ಸುದ್ದಿ, ಗದಗ

ಮಲಪ್ರಭಾ ಜಲಾಶಯದಿಂದ (ಮಲಪ್ರಭಾ ಬಲದಂಡೆ ಕಾಲುವೆ ಹಾಗೂ ನರಗುಂದ ಶಾಖಾ ಕಾಲುವೆಗೆ) ಮೇ 14ರಿಂದ ನೀರು ಹರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ನಗರದ ಕೇಸ್ವಾನ್ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆದು ಅವರು ಮಾತನಾಡಿದರು.

ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಜಿಲ್ಲೆಯ ಕೆಲವು ಭಾಗಗಳಲ್ಲಿ ದೂರುಗಳು ಕೇಳಿಬರುತ್ತಿದ್ದು, ಈ ಹಿನ್ನೆಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು. ಕುಡಿಯುವ ನೀರು ಪೂರೈಕೆಯಲ್ಲಿ ದೂರುಗಳು ಕೇಳಿ ಬರದಂತೆ ಗಮನ ಹರಿಸಬೇಕು ಎಂದರು.




ಜೂನ್ ಅಂತ್ಯದವರೆಗೂ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ಗಮನ ಹರಿಸಬೇಕು. ಕುಡಿಯುವ ನೀರು ಪೂರೈಕೆಗೆ ಪ್ರಥಮಾದ್ಯತೆ ನೀಡಬೇಕು ಎಂದು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಜಿ.ಪಂ ಸಿಇಓ ಎಸ್. ಭರತ್ ಮಾತನಾಡಿ, ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ ನೀಡಬೇಕು. ಕುಡಿಯುವ ನೀರು ಸಂಬಂಧ ತುರ್ತು ಕಾಮಗಾರಿಗಳಿಗೆ ಅನುಮೋದನೆ ಪಡೆದು ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ದೂರುಗಳು ಕೇಳಿಬರುತ್ತಿದ್ದು, ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು. ಅಧಿಕಾರಿಗಳು ಎಚ್ಚೆತ್ತು ಕಾರ್ಯನಿರ್ವಹಿಸಬೇಕು ಎಂದು ತಾಕೀತು ಮಾಡಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಕುಡಿಯುವ ನೀರು ಪೂರೈಕೆಗೆ ಜಿಲ್ಲಾಡಳಿತದ ವತಿಯಿಂದ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಆ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅಧಿಕಾರಿಗಳು ಸ್ಪಂದಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಂಕದ, ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ಜಿ.ಪಂ ಇಂಜಿನಿಯರ್‌ಗಳು, ತಹಸೀಲ್ದಾರರು, ತಾ.ಪಂ ಇಓಗಳು, ಪುರಸಭೆ ಹಾಗೂ ಪ.ಪಂ ಮುಖ್ಯಾಧಿಕಾರಿಗಳು ಕುಡಿಯುವ ನೀರು ಸಂಬಂಧಿಸಿದಂತೆ ಮಾಹಿತಿ ನೀಡಿದರು.

## ಸೂಕ್ಷ್ಮ ವೀಕ್ಷಕರ ತರಬೇತಿ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಸಂಬಂಧ ಸೂಕ್ಷ್ಮ ವೀಕ್ಷಕರ ತರಬೇತಿ ಕಾರ್ಯಾಗಾರವು ಶುಕ್ರವಾರ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ನಡೆಯಿತು.

ಹಾವೇರಿ ಲೋಕಸಭಾ ಚುನಾವಣಾ ಸಾಮಾನ್ಯ ವೀಕ್ಷಕರಾದ ಆದೇಶ್ ಟೈಟಮಾರೆ ಐಎಎಸ್ ತರಬೇತಿ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದ ಬಳಿಕ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಚುನಾವಣಾ ಆಯೋಗವು ಸೂಕ್ಷ್ಮ ವೀಕ್ಷಕರಿಗೆ ನೀಡಿದ ಜವಾಬ್ದಾರಿ ತುಂಬಾ ಪ್ರಾಮುಖ್ಯತೆ ಪಡೆದಿದ್ದು, ಎಲ್ಲರೂ ಕರ್ತವ್ಯ ಪ್ರಜ್ಞೆಯಿಂದ ಕಾರ್ಯನಿ ರ್ವಹಿಸಬೇಕು ಎಂದು ಹೇಳಿದರು.

ಮತದಾನ ಕೇಂದ್ರದಲ್ಲಿ ಯಾವುದೇ ರೀತಿಯ ದೋಷ ಕಂಡುಬಂದಲ್ಲಿ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಬೇಕು. ಚುನಾವಣಾ ಆಯೋಗದ ನಿರ್ದೇಶನ ಹಾಗೂ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಬೇಕು ಎಂದು ಹೇಳಿದರು.



ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮಾತನಾಡಿ, ಸೂಕ್ಷ್ಮ ವೀಕ್ಷಕರು ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಇದ್ದರು.


### ಚಿತ್ರನಟಿ ಶೃತಿ ಅವರಿಂದ ಬಿಜೆಪಿ ಪರ ಲಕ್ಕುಂಡಿಯಲ್ಲಿ ರೋಡ್ ಶೋ

# ಬಿಜೆಪಿ ಬಡ ಕುಟುಂಬಗಳ ಆಶಾಕಿರಣ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು ಗರೀಬಿ ಹಠಾವೊ ಮೂಲಕ ಬಡವರ ಏಳ್ಗೆಯ ಘೋಷಣೆ ಮಾಡಿದರು. ಅದನ್ನೇ ರಾಜೀವ ಗಾಂಧಿಯವರು ಹೇಳುತ್ತಾ ಬಂದರು. ಈಗ ರಾಹುಲ್ ಗಾಂಧಿ ಸಹ ಅದನ್ನೇ ಹೇಳುತ್ತಿದ್ದು, ಮೂರು ತಲೆಮಾರಿನಿಂದ ಬಡವರ ಏಳ್ಗೆ ಆಗಲಿಲ್ಲ. ಹೇಳಿದವರ ಕುಟುಂಬ ಮಾತ್ರ ಶ್ರೀಮಂತವಾಗುತ್ತಾ ಬಂದಿತು ಎಂದು ಬಿಜೆಪಿ ನಾಯಕಿ, ಖ್ಯಾತ ಚಿತ್ರನಟಿ ಶೃತಿ ಹೇಳಿದರು.

ಬಾಗಲಕೋಟ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡರ ಪರ ಪ್ರಚಾರಾರ್ಥವಾಗಿ ಹಮ್ಮಿಕೊಂಡಿದ್ದ ರೋಡ್ ಶೋ ನಂತರ ಬಜಾರ ರಸ್ತೆಯಲ್ಲಿ ಮತದಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.



ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಕಾಂಗ್ರೆಸ್ ಸರಕಾರವು ಬಿಟ್ಟಿ ಭಾಗ್ಯಗಳನ್ನು ನೀಡುವ ಮೂಲಕ ಜನರನ್ನು ಆಲಸಿಗಳನ್ನಾಗಿ ಮಾಡುತ್ತಿದೆ. ಆದರೆ ಮೋದಿಯವರ ಸರಕಾರ ವ್ಯಕ್ತಿತ್ವವನ್ನು ರೂಪಿಸುವ ಲಕ್‌ಪತಿ ದೀದೀ ಯೋಜನೆ ಮೂಲಕ ಮಹಿಳೆಯರನ್ನು ಸ್ವಾವಲಂಬಿ ಜೀವನ ನಡೆಸಲು ಪ್ರೋತ್ಸಾಹ ನೀಡುತ್ತಿದೆ. ಎಲ್ಲರನ್ನು ಶ್ರಮಿಕರನ್ನಾಗಿ ಮಾಡುತ್ತಿದ್ದಾರೆ. ಸೈನಿಕರ ಮೇಲಿರುವ ಕಾಳಜಿ, ಗಡಿ ಭದ್ರತೆ ಸೇರಿದಂತೆ ಆರ್ಥಿಕವಾಗಿ ಸದೃಢ ಭಾರತವಾಗಿ ಹೊರಹೊಮ್ಮುತ್ತಿರುವುದು ತಮ್ಮೆಲ್ಲರ ಕಣ್ಣೆದುರಿಗೆ ಇದೆ ಎಂದರು.

10 ವರ್ಷಗಳ ಕಾಲ ಅಧಿಕಾರ ನಡೆಸಿದ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರಕಾರ 25 ಕೋಟಿ ಬಡ ಕುಟುಂಬಗಳ ಆಶಾಕಿರಣವಾಗಿದ್ದು, ಪ್ರಪಂಚದಲ್ಲಿಯೇ ಶುದ್ಧ ಹಸ್ತ ಪ್ರಧಾನಿಯಾಗಿ ಬೆಳಗಿದ್ದಾರೆ. ಇನ್ನು ಸಂವಿಧಾನದ ಬಗ್ಗೆ ಮಾತನಾಡುವ ಕಾಂಗ್ರೆಸ್, ಅಂಬೇಡ್ಕರ ಅವರನ್ನು ಸೋಲಿಸಿದರು. ಜವಾಹರಲಾಲ ನೆಹರು ಅವರೇ ಅವರ ವಿರುದ್ಧ ಪ್ರಚಾರ ಮಾಡಿದರು. ಅವರು ನಿಧನರಾಗಿದ್ದಾಗ ಅವರ ಅಂತ್ಯಕ್ರಿಯೆಗೆ ಸ್ಥಳ ನೀಡದ ಕಾಂಗ್ರೆಸ್ ಸರಕಾರ ಸಂವಿಧಾನ ಉಳಿವಿನ ಬಗ್ಗೆ ಬಿಜೆಪಿ ವಿರುದ್ಧ ಮಾತನಾಡುತ್ತಿದೆ. ಆದರೆ ಇಂದು ಬಿಜೆಪಿಯು ಅಂಬೇಡ್ಕರರಿಗೆ ಬಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ಹೀಗಾಗಿ, ಮೋದಿಯವರ ಕೈ ಬಲಬಡಿಸಲು ಬಿಜೆಪಿಗೆ ಮತ ನೀಡಿ ಎಂದರು.

ಬಿಜೆಪಿ ಮುಖಂಡ ಡಾ. ಶೇಖರ ಸಜ್ಜನ, ಯುವ ಮುಖಂಡ ಉಮೇಶಗೌಡ ಪಾಟೀಲ ಸೇರಿದಂತೆ ಪಕ್ಷದ ಮುಖಂಡರು, ಮಹಿಳೆಯರು ಪಾಲ್ಗೊಂಡಿದ್ದರು. ಮಾಜಿ ಸೈನಿಕ, ಬಿಜೆಪಿ ಧುರೀಣ ದತ್ತಾತ್ರೇಯ ಜೋಶಿ ಸ್ವಾಗತಿಸಿ ವಂದಿಸಿದರು.

**ಜಂಗಮ ಸಮುದಾಯದ ಬೆಂಬಲಕ್ಕೆ ಋಣಿಯಾಗಿದ್ದೇನೆ: ಬೊಮ್ಮಾಯಿ**

# ದೇಶ ಉಳಿದರೆ ಧರ್ಮ ಉಳಿಯಲಿದೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಂಗಮ ಸಮುದಾಯ ಬೆಂಬಲ ನೀಡಿರುವುದಕ್ಕೆ ಋಣಿಯಾಗಿದ್ದೇವೆ. ನಿಮ್ಮ ಆಶೀರ್ವಾದ ನನಗೆ ಸಿಕ್ಕಿರುವುದು ಬಹಳಷ್ಟು ಸಂತೋಷವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಭಾರತ ಭಕ್ತಿ ಪ್ರಧಾನ ದೇಶ. ಭಾರತದಲ್ಲಿ ಆಗಿರುವ ಭಕ್ತಿ ಚಳುವಳಿಗಳು ಬೇರೆ ಯಾವ ದೇಶದಲ್ಲಿಯೂ ಆಗಿಲ್ಲ. ನಮ್ಮ ಗುರುಗಳನ್ನು ಗೌರವಿಸುವುದು ನಮ್ಮ ಸಂಸ್ಕೃತಿ. ನಾವು ಲಿಂಗ ಪೂಜೆ ಮಾಡದೇ ಹೊರಗೆ ಬರುವುದಿಲ್ಲ. ನಾವು ಸಿದ್ಧಾಂತ ಶಿಖಾಮಣಿಯನ್ನು ಪಾಲಿಸಿದರೆ ನಾವು ಪರಿಪೂರ್ಣರಾಗುತ್ತೇವೆ ಎಂದು ಹೇಳಿದರು.

ಸಂಘಟಿತವಾದ ಸಮಾಜ ಇದ್ದರೆ ಮಾತ್ರ ಎಲ್ಲವನ್ನೂ ಎದುರಿಸಲು ಸಾಧ್ಯ. ದೇಶ ಉಳಿದರೆ ಮಾತ್ರ ನಮ್ಮ ಧರ್ಮ, ಸಂಸ್ಕಾರ ಉಳಿಯಲಿದೆ. ಬೇರೆಯವರಿಗೆ ಬೇರೆ ದೇಶಗಳಿವೆ.

ನೀವು ಮತದ ಮೂಲಕ ಪ್ರೀತಿ ಕೊಡಬೇಕು ಅದಕ್ಕೆ ವಿಶ್ವಾಸ ಬರುವ ರೀತಿಯಲ್ಲಿ ನಾನು ಸಮಾಜದ ಜೊತೆಗೆ ಇರುತ್ತೇನೆ. ನಿಮ್ಮ ಸಹೋದರನನ್ನು ಸಂಸತ್ತಿಗೆ ಕಳುಹಿಸಿ, ನಿಮ್ಮ ಮತವನ್ನು ಸ್ವಂತಕ್ಕೆ ಬಳಸಿಕೊಳ್ಳದೇ, ನಿಮ್ಮ ಸೇವೆಗೆ ಮೀಸಲಿಡುವೆ ಎಂದು ಹೇಳಿದರು.

ಸಭೆಯಲ್ಲಿ ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹಾಗೂ ಜಂಗಮ ಸಮಾಜದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

> ನಾನು ಹುಟ್ಟಿ ಬೆಳೆದಿದ್ದು ಹುಬ್ಬಳ್ಳಿಯ ಯಕ್ಕುಂಡಿ ಮಠದಲ್ಲಿ. ನಮ್ಮ ತಂದೆ ಯಕ್ಕುಂಡಿ ಮಠದಲ್ಲಿ ಬಾಡಿಗೆ ಇದ್ದರು. ರುದ್ರಯ್ಯ ಸ್ವಾಮಿ ನನ್ನ ಬೆಳೆಸಿದರು. ಅವರು ಉಗ್ರ ತಪಸ್ವಿ ಅವರು ನನ್ನ ಆರಾದ್ಯ ದೈವ. ನನಗೆ ಆಚಾರ, ವಿಚಾರ ಸಂಸ್ಕಾರ ಕಲಿಸಿಕೊಟ್ಟವರು. ಗುರುವಿಗೂ ಭಕ್ತರಿಗೂ ಬಹಳ ಅನ್ಯೋನ್ಯವಾಗಿರುವ ಸಂಬಂಧ ಇದೆ. ಗುರುವಿನ ಆಶೀರ್ವಾದ ಪಡೆದುಕೊಳ್ಳುವುದು ಅತ್ಯಂತ ಮುಖ್ಯ. ಭಕ್ತಿ ಎಂದರೆ ಉತ್ಕೃಷ್ಟ ಪ್ರೀತಿ, ಗುರುವಿನಲ್ಲಿ ಲೀನವಾದಾಗ ಸಂಸ್ಕಾರ ದೊರೆಯುತ್ತದೆ. ಗುರುಗಳೆಲ್ಲರೂ ಸೇರಿ ಆಶೀರ್ವಾದ ಮಾಡಿರುವುದು ನನ್ನ ಪೂರ್ವಜನ್ಮದ ಪುಣ್ಯ.
>
> **– ಬಸವರಾಜ್ ಬೊಮ್ಮಾಯಿ,**
> ಬಿಜೆಪಿ ಅಭ್ಯರ್ಥಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರ.

# ಕಾಂಗ್ರೆಸ್ ಎಲ್ಲಾ ಭರವಸೆಗಳನ್ನು ಈಡೇರಿಸಿದೆ




**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲಿದ್ದು, ನಿಮ್ಮೆಲ್ಲರ ಆಶೀರ್ವಾದದಿಂದ ಪಕ್ಷ ಗೆಲುವು ಸಾಧಿಸಲಿದೆ. ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಆಶೀರ್ವದಿಸಿ ಎಂದು ಆನಂದಸ್ವಾಮಿ ಗಡ್ಡದೇವರಮಠ ಮತ ಯಾಚಿಸಿದರು.

ಸಮೀಪದ ಜಕ್ಕಲಿ ಗ್ರಾಮದಲ್ಲಿ ಗುರುವಾರ ರೋಡ್ ಶೋ ನಡೆಸಿ ಮತಯಾಚಿಸಿ ಮಾತನಾಡಿದ ಅವರು, ನುಡಿದಂತೆ ನಡೆದ ರಾಜ್ಯ ಕಾಂಗ್ರೆಸ್ ಸರ್ಕಾರ ಎಲ್ಲಾ ಭರವಸೆಗಳನ್ನು ಈಡೇರಿಸಿದ್ದು, ಸಿದ್ದರಾಮಯ್ಯನವರು ಯಾವದೇ ಜಾತಿ-ಧರ್ಮ ಎನ್ನದೇ ಪ್ರತಿ ಮನೆಗಳಿಗೆ ಯೋಜನೆಗಳನ್ನು ತಲುಪಿಸಿದ್ದಾರೆ. ಹೆಚ್ಚಿನ ಮತವನ್ನು ನೀಡುವುದರ ಮೂಲಕ ನಿಮ್ಮ ಸೇವೆಗೆ ಅವಕಾಶ ನೀಡಿ ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ರೋಣ ಶಾಸಕ ಜಿ.ಎಸ್. ಪಾಟೀಲ, ಧುರೀಣರಾದ ಚನ್ನಬಸವ ದೊಡ್ಡಮೇಟಿ, ಮಿಥುನ್ ಪಾಟೀಲ, ಎಂ.ಎಸ್. ದಢೇಸೂರಮಠ, ವಿ.ಆರ್. ಗುಡಿಸಾಗರ, ಅಕ್ಷಯ್ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಶರಣಪ್ಪಮಾಸ್ಟರ್ ಬೂದಿಹಾಳ, ವೀರಣ್ಣ ಸಂಗಳದ, ಪ್ರಕಾಶ್ ಕೋರಿ, ಪ್ರಕಾಶಪ್ಪ ಹೊಸಮನಿ, ಯುವ ಮುಖಂಡರಾದ ಮುತ್ತಣ್ಣ ಮೇಟಿ, ಶಂಭು ಕೋರಿ, ಮುತ್ತಣ್ಣ ಅಕ್ಕಿಶೆಟ್ಟರ್, ನಿಂಗಪ್ಪ ರೋಣದ, ಬಂಧು ಗಡಾದ, ಚನ್ನಬಸವ ಅರಹುಣಸಿ, ಶಿವಪುತ್ರಪ್ಪ ಯಾವಗಲ್ಲ, ಅಂದಪ್ಪ ಹೂಗಾರ, ವೀರಭದ್ರಪ್ಪ ಗಾಣಿಗೇರ, ಪ್ರಮೋದ್ ಯಾವಗಲ್ಲ, ಸಂದೇಶ ದೊಡ್ಡಮೇಟಿ, ದಾನೇಶ ಮುಗಳಿ, ಮಹಾಂತೇಶ ಕೌಜಗೇರಿ, ಬಸವರಾಜ ಆದಿ, ಮಲ್ಲಪ್ಪ ಸತ್ತಿಗೇರಿ, ಆರ್.ಬಿ. ವಾಲಿ, ರವೀಂದ್ರ ಮುಗಳಿ, ಸಂಜೀವ ಅಸೂಟಿ, ಹುಚ್ಚುಸಾಬ್ ಬಸಾಪೂರ, ಮಾಬುಸಾಬ ನದಾಫ್, ಮಲೇಯಪ್ಪ ತಳವಾರ, ಯಲ್ಲಪ್ಪ ಮಾದರ ಮುಂತಾದವರು ಇದ್ದರು.

# ಬಸವ ಜಯಂತಿ ಪೂರ್ವಭಾವಿ ಸಭೆ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಜ. ತೋಂಟದಾರ್ಯ ಮಠದ ಶಿವಾನುಭವ ಮಂಟಪದಲ್ಲಿ ಮೇ. 4ರ ಸಂಜೆ 6 ಗಂಟೆಗೆ ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯ ಪೂರ್ವಭಾವಿ ಸಭೆ ಕರೆಯಲಾಗಿದೆ.

ಜಗದ್ಗುರು ತೋಂಟದಾರ್ಯ ಜಾತ್ರಾ ಸಮಿತಿ-24, ಲಿಂಗಾಯತ ಪ್ರಗತಿಶೀಲ ಸಂಘ, ಬಸವದಳ, ಬಸವಕೇಂದ್ರ, ಶರಣ ಸಾಹಿತ್ಯ ಪರಿಷತ್ತು, ಜಾಗತಿಕ ಲಿಂಗಾಯತ ಮಹಾಸಭೆ, ದಲಿತ ಸಂಘರ್ಷ ಸಮಿತಿ, ಬಸವ ಯೊಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಶರಣರಾದ ಮಾದಾರ ಚೆನ್ನಯ್ಯ, ಡೋಹರ ಕಕ್ಕಯ್ಯ, ಮಡಿವಾಳ ಮಾಚಯ್ಯ, ಅಂಬಿಗರ ಚೌಡಯ್ಯ, ಸಮಗಾರ ಹರಳಯ್ಯ, ನೂಲಿಯ ಚೆಂದಯ್ಯ, ಹಡಪದ ಅಪ್ಪಣ್ಣ, ಶಿವಯೋಗಿ ಸಿದ್ಧರಾಮೇಶ್ವರ, ಮೇದಾರ ಕೇತಯ್ಯ ಮುಂತಾದ ಬಸವಪರ ಸಂಘಟನೆಗಳ ಸದಸ್ಯರು ಭಾಗವಹಿಸಿ ಬಸವ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ತಮ್ಮ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಎಸ್.ಕಳಸಾಪೂರಶೆಟ್ರು, ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

**ಪ್ರಿಯಾಂಕಾ ಗಾಂಧಿಯವರು ಗದುಗಿಗೆ ಆಗಮಿಸುತ್ತಿರುವ ಪ್ರಯುಕ್ತ ಪರಿಚಯಾತ್ಮಕ ಲೇಖನ**

# ಜನಸ್ಪಂದನೆಯ ರೂವಾರಿ ಪ್ರಿಯಾಂಕಾ ಗಾಂಧಿ

ಪ್ರಿಯಾಂಕಾ ಗಾಂಧಿಯವರು ಅಖಿಲ ಭಾರತ ಕಾಂಗ್ರೆಸ್ ಸಮಿತಿಯಲ್ಲಿ ಉತ್ತರ ಪ್ರದೇಶದ ಪ್ರಧಾನ ಕಾರ್ಯದರ್ಶಿಯಾಗಿದ್ದು, ಸಮಸ್ತ ಭಾರತದ ಎರಡು ಪ್ರಮುಖ ರಾಜಕೀಯ ಪಕ್ಷಗಳಲ್ಲಿ ಒಂದಾದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಕೇಂದ್ರ ನಿರ್ಧಾರ ತೆಗೆದುಕೊಳ್ಳುವ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

**ಕೌಟುಂಬಿಕ ಹಿನ್ನೆಲೆ:** ಪ್ರಿಯಾಂಕಾ ಗಾಂಧಿ ವಾದ್ರಾ ಅವರು ದೇಶ ಕಂಡ ಮರೆಯದ ಮಾಣಿಕ್ಯ ಇಂದಿರಾ ಗಾಂಧಿಯವರ ಮೊಮ್ಮಗಳು. ರಾಜಕೀಯವಾಗಿ ಪ್ರಬಲವಾದ ನೆಹರು-ಗಾಂಧಿ ಕುಟುಂಬದ ಕುಡಿಯಾಗಿದ್ದು, ಭಾರತವು ಬ್ರಿಟಿಷ್ ಆಳ್ವಿಕೆಯಿಂದ ಸ್ವಾತಂತ್ರ್ಯ ಪಡೆಯುವ ಮೊದಲು ದಶಕಗಳಿಂದ ಭಾರತೀಯ ರಾಜಕೀಯದಲ್ಲಿ ಪ್ರಾಬಲ್ಯ ಹೊಂದಿದೆ. ಅವರು ಮಾಜಿ ಪ್ರಧಾನಿ ರಾಜೀವ್ ಗಾಂಧಿ ಮತ್ತು ಹಂಗಾಮಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿಯವರ ಪುತ್ರಿ, ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿಯವರ ಸಹೋದರಿಯಾಗಿದ್ದಾರೆ.

**ರಾಜಕೀಯ ಜೀವನ:** ಪ್ರಿಯಾಂಕಾ ಗಾಂಧಿಯವರು ತಮ್ಮ ರಾಜಕೀಯ ವೃತ್ತಿ ಜೀವನದ ಮೊದಲ ವರ್ಷಗಳಲ್ಲಿ, ಗಾಂಧಿ ವಾದ್ರಾ ಅವರು ಸಕ್ರಿಯ ರಾಜಕೀಯಕ್ಕೆ ಸೇರುವ ಅಭಿಲಾಷೆಯನ್ನು ಹೊಂದಿದವರಲ್ಲ. ಆದರೆ ಉತ್ತರ ಪ್ರದೇಶದ ರಾಯ್ಬರೇಲಿ ಕ್ಷೇತ್ರದಲ್ಲಿ ಪ್ರಿಯಾಂಕಾ ಗಾಂಧಿಯವರ ತಾಯಿ ಸೋನಿಯಾ ಮತ್ತು ಅಮೇಥಿಯಲ್ಲಿ ಅವರ ಸಹೋದರ ರಾಹುಲ್ ಅವರ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿ ನೆರವಾದರು. 2004ರ ಭಾರತೀಯ ಸಾರ್ವತ್ರಿಕ ಚುನಾವಣೆಯ ಪಕ್ಷದ ಪ್ರಚಾರದ ಸಮಯದಲ್ಲಿ ಅವರು ರಾಜಕೀಯಕ್ಕೆ ಮೊಟ್ಟ ಮೊದಲ ದೃಢ ಹೆಜ್ಜೆಯನ್ನು ಇಡುವ ಮೂಲಕ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದರು. ಅಲ್ಲಿ ಅವರು ಹಲವಾರು ಕ್ಷೇತ್ರಗಳಲ್ಲಿ ರಾಜಕೀಯ ರ್‍ಯಾಲಿಗಳನ್ನು ನಡೆಸಿದರು ಮತ್ತು ಉತ್ತರ ಪ್ರದೇಶದ ರಾಜಕೀಯ ಕ್ಷೇತ್ರದಲ್ಲಿ ಮೊಟ್ಟ ಮೊದಲ ಬಾರಿಗೆ ಮುನ್ನುಗ್ಗಿದರು.



ಜನವರಿ 23, 2019ರಂದು ಉತ್ತರ ಪ್ರದೇಶದ ಪೂರ್ವ ಭಾಗದ ಉಸ್ತುವಾರಿ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡಾಗ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಔಪಚಾರಿಕವಾಗಿ ಸಕ್ರಿಯ ರಾಜಕೀಯವನ್ನು ಪ್ರವೇಶಿಸಿದರು. ಅವರನ್ನು ಸೆಪ್ಟೆಂಬರ್ 11, 2020ರಂದು ಇಡೀ ಉತ್ತರ ಪ್ರದೇಶದ ಉಸ್ತುವಾರಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಲಾಯಿತು.

2022ರ ಉತ್ತರ ಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ಪ್ರಿಯಾಂಕಾ ಗಾಂಧಿ ವಾದ್ರಾ ನೇತೃತ್ವದಲ್ಲಿ ಕಾಂಗ್ರೆಸ್ ನಿರ್ಣಾಯಕ ಹೋರಾಟದಲ್ಲಿ ಭಾಗವಹಿಸಿದ್ದರು. ಅವರು 23 ಅಕ್ಟೋಬರ್ 2021ರಂದು ಬಾರಾಬಂಕಿಯಿಂದ ಪಕ್ಷದ ಪ್ರಚಾರವನ್ನು ಪ್ರಾರಂಭಿಸಿದರು. ಅವರು ಇಲ್ಲಿಯವರೆಗಿನ ಪ್ರಚಾರದ ಏಕೈಕ ಮುಖವಾಗಿದ್ದಾರೆ ಮತ್ತು ಉತ್ತರ ಪ್ರದೇಶ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಮುಖ್ಯಮಂತ್ರಿ ಹುದ್ದೆಗೆ ಮುಂಚೂಣಿಯಲ್ಲಿರುವ ಸಾಧ್ಯತೆಯಿದೆ. ಕಾಂಗ್ರೆಸ್ ಪಕ್ಷದ ಒಂದು ವಿಭಾಗವು ಪ್ರಿಯಾಂಕಾ ಗಾಂಧಿ ವಾದ್ರಾರವರು ತಮ್ಮ ಅಜ್ಜಿ, ಭಾರತ ಕಂಡ ಉಕ್ಕಿನ ಮಹಿಳೆ ಶ್ರೀಮತಿ ಇಂದಿರಾ ಗಾಂಧಿಯವರು ಕಂಡಂತೆ ಆಭೂತಪೂರ್ವ ಪಕ್ಷ ಸಂಘಟನೆಯಲ್ಲಿ ಒಂದು ದಿನ ಪಕ್ಷವನ್ನು ಮುನ್ನಡೆಸಬೇಕೆಂದು ಸಮಸ್ತ ದೇಶದ ಕಾಂಗ್ರೆಸ್ ಪಕ್ಷದ ಅಭಿಮಾನಿಗಳ ಜನಾಭಿಪ್ರಾಯವಾಗಿದೆ.

**ಆರಂಭಿಕ ಜೀವನ ಮತ್ತು ಶಿಕ್ಷಣ:** ಗಾಂಧಿ ವಾದ್ರಾ ಅವರು ಜನವರಿ 12, 1972ರಂದು ಜನಿಸಿದರು. ಅವರು ತಮ್ಮ ಶಾಲಾ ಶಿಕ್ಷಣವನ್ನು ನವದೆಹಲಿಯ ಮಾಡರ್ನ್ ಸ್ಕೂಲ್ ಮತ್ತು ಕಾನ್ವೆಂಟ್ ಆಫ್ ಜೀಸಸ್ ಮತ್ತು ಮೇರಿಯಲ್ಲಿ ಮಾಡಿದರು. ಅವರು ದೆಹಲಿ ವಿಶ್ವವಿದ್ಯಾಲಯದ ಜೀಸಸ್ ಮತ್ತು ಮೇರಿ ಕಾಲೇಜಿನಲ್ಲಿ ಮನೋವಿಜ್ಞಾನದಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿದ್ದಾರೆ ಮತ್ತು ಬೌದ್ಧ ಅಧ್ಯಯನದಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದಾರೆ.

**ವೈಯಕ್ತಿಕ ಜೀವನ:** ಗಾಂಧಿ ವಾದ್ರಾ ಅವರು ರಿಯಲ್ ಎಸ್ಟೇಟ್ ಡೆವಲಪರ್ ಡಿಎಲ್‌ಎಫ್‌ನೊಂದಿಗೆ ಭೂ ವ್ಯವಹಾರಗಳಲ್ಲಿ ತೊಡಗಿದ ಹೊಸ ದೆಹಲಿ ಮೂಲದ ಉದ್ಯಮಿ ರಾಬರ್ಟ್ ವಾದ್ರಾ ಅವರನ್ನು ವಿವಾಹವಾದರು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ-ಒಬ್ಬ ಮಗ ಮತ್ತು ಮಗಳು. ಗಾಂಧಿ ವಾದ್ರಾ ಅವರು ಬೌದ್ಧ ತತ್ವಶಾಸ್ತ್ರದ ಕಟ್ಟಾ ಅನುಯಾಯಿಯಾಗಿದ್ದಾರೆ.

**ಮಹಿಳೆಯರ ಮನಗೆದ್ದ ಪ್ರಿಯಾಂಕಾ ಗಾಂಧಿ:** ಕರ್ನಾಟಕ ರಾಜ್ಯದ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ನಾಗರಿಕರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಮತ್ತು ನೈತಿಕ ಶ್ರೇಯೋಭಿವೃದ್ಧಿಗಾಗಿ, ಮಹಿಳಾ ಸಬಲಿಕರಣದ ಸದುದ್ದೇಶದೊಂದಿಗೆ ರಾಜ್ಯದ ನಾಗರಿಕರ ಪಂಚ ಗ್ಯಾರಂಟಿ ಯೋಜನೆಗಳ ಅಡಿಯಲ್ಲಿ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಜಮಾ ಮಾಡುವಂತೆ ಮಹತ್ವದ ಹೆಜ್ಜೆಯನ್ನಿಟ್ಟು ಮಹಿಳೆಯರ, ಯುವಕರ ಮನ ಗೆದ್ದಿದ್ದಾರೆ. ನಿರುದ್ಯೋಗಿ ಪದವೀಧರರಿಗೆ ಮಾಶಾಸನದಂತಹ ಮಹತ್ವಪೂರ್ಣ ಜನಸ್ಪಂದನೆಯ ಯೋಜನೆಯ ರೂವಾರಿಯಾಗಿದ್ದಾರೆ.



**– ಸಹನಾ ರಾಘವೇಂದ್ರ ಪಾಲನಕರ.**
**ಅಧ್ಯಕ್ಷರು, ಸೌಜನ್ಯತಾ ಸಮಗ್ರ ನಾಗರಿಕ ಹಿತರಕ್ಷಣಾ ಸಮಿತಿ.**

# ದೇಹದ ತೇವಾಂಶ ಕಾಯ್ದುಕೊಳ್ಳಲು ಸಲಹೆ




**■ ವಿಜಯಸಾಕ್ಷಿ ಸುದ್ದಿ, ಗದಗ**

ರೋಟರ್‍ಯಾಕ್ಟ್ ಸಂಸ್ಥೆ, ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಗದಗ ಹಾಗೂ ರೋಟರಿ ಸಂಸ್ಥೆ ಗದಗ ಬೆಟಗೇರಿಯ ಸದಸ್ಯರು ಕ್ರೀಡಾಪಟುಗಳು ಹಾಗೂ ನಾಗರಿಕರು ಏರುತ್ತಿರುವ ಬಿಸಿಲು ಹಾಗೂ ಸೆಖೆಯಿಂದ ತಮ್ಮ ದೇಹವನ್ನು ಹೇಗೆ ರಕ್ಷಿಸಿಕೊಂಡು, ದೇಹದ ತೇವಾಂಶ (ಹೈಡ್ರೇಟ್) ಕಾಪಾಡಿಕೊಳ್ಳಬೇಕೆಂದು ತಿಳುವಳಿಕೆ ನೀಡುವ ಕರಪತ್ರವನ್ನು ಮುದ್ರಿಸಿ ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳು ಹಾಗೂ ಸಾರ್ವಜನಿಕರಿಗೆ ವಿತರಿಸಿದರು.

ಕರಪತ್ರದಲ್ಲಿ ಶುದ್ಧ ನೀರನ್ನು ಕುಡಿಯುವದರಿಂದ ಆಗುವ ಲಾಭಗಳ ಕುರಿತು ಮಾಹಿತಿ ನೀಡಿದೆ. ನಾಗರಿಕರು ಮಧ್ಯಾಹ್ನದ ಸುಡು ಬಿಸಿಲಿನಲ್ಲಿ ಹೊರಗೆ ಬರುವುದನ್ನು ತಪ್ಪಿಸಲು ಸಲಹೆ ನೀಡಿದರು.

ರೋಟರಿ ಸಂಸ್ಥೆಯ ಅಧ್ಯಕ್ಷ ಚಂದ್ರಮೌಳಿ ಜಾಲಿ, ಕಾರ್ಯದರ್ಶಿ ವೀಣಾ ತಿರ್ಲಾಪೂರ, ಸದಸ್ಯರಾದ ಕಮಲಾಕ್ಷಿ ಅಂಗಡಿ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಶ್ರೀಧರ ಸುಲ್ತಾನಪೂರ, ರೋಟ-ರ್‍ಯಾಕ್ಟ್ ಸಂಸ್ಥೆ ಜೆ.ಟಿ. ಕಾಲೇಜ್ ಬಿಸಿಎ & ಬಿಬಿಎ ಗದಗ ಅಧ್ಯಕ್ಷ ವಿಶ್ವಾಸ ಕೊಪ್ಪಳ, ಕಾರ್ಯದರ್ಶಿ ವೀರೇಂದ್ರ ಚನ್ನಪ್ಪನ್ನವರ, ಪ್ರಜ್ವಲ, ರಾಜು, ಪ್ರೀತಮ್, ಶಮಂತ, ಸಂಗಮೇಶ, ಪ್ರಿಯಾಂಕಾ, ಶ್ರೀನಾಥ, ಶಿವಕುಮಾರ, ಪಲ್ಲವಿ, ಶ್ರದ್ಧಾ, ಪ್ರಜ್ವಲ್ ಜೆ, ಕಲ್ಲಯ್ಯ, ರಾಘವೇಂದ್ರ, ಚಂದನಾ, ಪುಷ್ಪಾ ಮುಂತಾದವರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಮತ ನೀಡಿ ಆಶೀರ್ವದಿಸಬೇಕು ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮನವಿ ಮಾಡಿದರು.



ನಗರದ ಹುಬ್ಬಳ್ಳಿ ರಸ್ತೆಯಲ್ಲಿರುವ ಗಣಪತಿ ಪಾಲನಕರ ಅವರ ನಿವಾಸದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ದೈವಜ್ಞ ಸಮಾಜದವರ ಸಭೆಯಲ್ಲಿ ಅವರು ಮಾತನಾಡಿದರು.

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ 3 ವರ್ಷದೊಳಗೆ ಶ್ರೀಮಂತರ 14 ಲಕ್ಷ ಕೋಟಿ ಸಾಲವನ್ನು ಮನ್ನಾ ಮಾಡಿದ್ದಾರೆ. ಆದರೆ, ರಾಜ್ಯದಲ್ಲಿ ವರ್ಷವಿಡೀ ಗ್ಯಾರಂಟಿ ಯೋಜನೆಗಳಿಗೆ 58 ಸಾವಿರ ಕೋಟಿ ಖರ್ಚು ಮಾಡಿದರೆ, ರಾಜ್ಯ ದಿವಾಳಿಯಾಗುತ್ತದೆ ಎಂಬ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿದರು.

ಸಭೆಯಲ್ಲಿ ದೈವಜ್ಞ ಸಮಾಜದ ಮುಖಂಡರಾದ ಅರವಿಂದ ಪಾಲನಕರ, ಗಣಪತಿ ಪಾಲನಕರ, ಪ್ರಮೋದ ರಾಯ್ಕರ್, ಸಂತೋಷ ಕುಡತರ್ಕರ, ಪ್ರಕಾಶ ರಾಯ್ಕರ್, ಮಹಿಳಾ ಮಂಡಳ ಸದಸ್ಯರು, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಬೆಂಬಲ ಸೂಚಿಸುವುದಾಗಿ ತಿಳಿಸಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಾಜಿ ಅಧ್ಯಕ್ಷ ಪ್ರಭು ಬುರಬುರೆ ಸೇರಿ ಹಲವರಿದ್ದರು.

# ಕಿರಟಗೇರಿ ಗ್ರಾಮಸ್ಥರ ಸಂಕಲ್ಪಕ್ಕೆ ಸುಭುದೇಂದ್ರ ತೀರ್ಥ ಶ್ರೀಗಳ ಆಶೀರ್ವಾದ

**■ ವಿಜಯಸಾಕ್ಷಿ ಸುದ್ದಿ, ಗದಗ**

400 ವರ್ಷಗಳ ಇತಿಹಾಸ ಹೊಂದಿರುವ ಮಂತ್ರಾಲಯ ಮಠದ ಶ್ರೀಗುರು ರಾಘವೇಂದ್ರ ಸ್ವಾಮಿಗಳು ಕಿರಟಗೇರಿ ಗ್ರಾಮಕ್ಕೆ ಆಗಮಿಸಿ, ಶ್ರೀಮೂಲರಾಮದೇವರ ಪೂಜೆ ಮಾಡುತ್ತಿರುವಾಗ ವೆಂಕಣ್ಣ ಕುಲಕರ್ಣಿಯವರ ಚಿಕ್ಕ ಬಾಲಕ ಆಕಸ್ಮಿಕವಾಗಿ ಮೃತಪಟ್ಟಾಗ ಶ್ರೀಗಳು ಪುನರ್ಜನ್ಮ ನೀಡಿ ಬದುಕಿಸಿದ ಘಟನೆ ಹಾಗೂ ಕಿರಟಗೇರಿ ಗ್ರಾಮವನ್ನು ಶ್ರೀಮಠಕ್ಕೆ ಜಹಾಗೀರ (ಭಕ್ಷಿಸ್) ನೀಡಿದ ವೆಂಕಣ್ಣ ಕುಲಕರ್ಣಿಯವರ ವಾಡೆಯಲ್ಲಿ ಈಗ ವಾಸಿಸುತ್ತಿರುವ ರಾಘವೇಂದ್ರ ಶ್ರೀಗಳ ಭಕ್ತರು ಮಂತ್ರಾಲಯ ಮಠಕ್ಕೆ ತೆರಳಿ ಶ್ರೀ ಸುಭುದೇಂದ್ರ ತೀರ್ಥ ಶ್ರೀಗಳಿಗೆ ಸಮರ್ಪಣಾ ಪತ್ರ ಸಲ್ಲಿಸಿದರು.





ಸಮರ್ಪಣಾ ಪತ್ರಕ್ಕೆ ಸ್ಪಂದಿಸಿದ ಶ್ರೀಗಳು, ವಾಡೆಯಲ್ಲಿ ವಾಸಿಸುತ್ತಿರುವ ಭಕ್ತರಿಗೆ ಆಶೀರ್ವಾದ ರೂಪದಲ್ಲಿ ನಗದು ಪರಿಹಾರ ನೀಡುವುದರ ಜೊತೆಗೆ ಕಿರಟಗೇರಿ ಗ್ರಾಮವನ್ನು ಸುಕ್ಷೇತ್ರವನ್ನಾಗಿ ಮಾಡುವ ಸಂಕಲ್ಪ ಶ್ರೀಮಠದ ಇಚ್ಛೆಯಾಗಿದೆ. 400 ವರ್ಷಗಳ ನಂತರ ಈ ಕ್ಷೇತ್ರದ ಅಭಿವೃದ್ಧಿ ಮಾಡುವ ಭಾಗ್ಯ ನನ್ನದಾಗಿದೆ. ಇದಕ್ಕೆ ಗುರು ರಾಘವೇಂದ್ರರ ಆಶೀರ್ವಾದವು ಇದೆ ಎಂದು ಆಶೀರ್ವದಿಸಿದರು.

ಕಿರಟಗೇರಿ ಗ್ರಾಮದ ವಾಡೆಯಲ್ಲಿ ವಾಸವಾಗಿದ್ದ ಶ್ರೀಮಠದ ಭಕ್ತರಾದ ಲಕ್ಷ್ಮೀಬಾಯಿ ಕುಲಕರ್ಣಿ, ಕಲ್ಮೇಶ್ವರಯ್ಯ ಹಿರೇಮಠ, ಶಿವಕುಮಾರಗೌಡ ಪಾಟೀಲ, ನಾಗರಾಜಗೌಡ ಪಾಟೀಲ, ನಿಂಗರಾಜಗೌಡ ಪಾಟೀಲ, ಶಂಕರಪ್ಪ ಪಡೇಸೂರ, ವಿರುಪಾಕ್ಷಪ್ಪ ನಾಗನೂರ, ವೀರಬಸಪ್ಪ ಕಟಕಟಿ, ಮಹೇಶ ಕೋಲಕಾದ, ಮಹೇಶಗೌಡ ಪಾಟೀಲ, ಕಲ್ಲಪ್ಪ ಹಡಪದ, ಮಲ್ಲಿಕಾರ್ಜುನ ಬೆಟದೂರ, ಚನ್ನಯ್ಯ ಹಿರೇಮಠ, ಬಸಯ್ಯ ಹಿರೇಮಠ, ಮನಸೂಕಲಾಲ ಪುಣೇಕರ, ಮುರಳಿ ಕುಲಕರ್ಣಿ, ಗುರಣ್ಣ ಹೆಬಸೂರ, ಮಂತ್ರಾಲಯದ ವಿಶೇಷ ಪ್ರತಿನಿಧಿ ಶ್ರೀನಿವಾಸ ಹುಬ್ಬಳ್ಳಿ, ಮಂತ್ರಾಲಯದ ವ್ಯವಸ್ಥಾಪಕ ಡಿ.ಎಮ್. ಆನಂದರಾವ್ ಮುಂತಾದವರು ಉಪಸ್ಥಿತರಿದ್ದರು.

**ಮೇ 5ರಂದು ಮಧ್ಯಾಹ್ನ 2 ಗಂಟೆಯಿಂದ ಸಂಜೆ 5.20ರವರೆಗೆ ಪರೀಕ್ಷೆ**

# ನೀಟ್ ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಪರೀಕ್ಷಾ ಏಜನ್ಸಿ ನವದೆಹಲಿ ವತಿಯಿಂದ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನೀಟ್ ( ಎನ್‌ಇಇಟಿ) ಪರೀಕ್ಷೆಗಳು ಮೇ 5ರಂದು ಮಧ್ಯಾಹ್ನ 2 ಗಂಟೆಯಿಂದ ಸಂಜೆ 5.20ರವರೆಗೆ ನಡೆಯಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಮೇ 5ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ, ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ರಾಷ್ಟ್ರೀಯ ಪರೀಕ್ಷಾ ಏಜನ್ಸಿ ನವದೆಹಲಿಯು ಪ್ರತಿಬಂಧಿಸಿದ ಯಾವುದೇ ವಸ್ತುಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಡಿ ತೆಗೆದುಕೊಂಡು ಹೋಗಲು ನಿರ್ಬಂಧವಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ವೈಶಾಲಿ ಎಂ.ಎಲ್ ಆದೇಶಿಸಿದ್ದಾರೆ.

## ಜಿಲ್ಲೆಯಲ್ಲಿ ನೀಟ್ ಪರೀಕ್ಷಾ ಕೇಂದ್ರಗಳು

ಗದಗ ಬೆಟಗೇರಿಯ ಸೇಂಟ್ ಜಾನ್ ಹೈಸ್ಕೂಲ್, ನಗರದ ಲಯನ್ಸ್ ಎಜ್ಯುಕೇಶನ್ ಸೊಸೈಟೀಸ್ ಜಿಡಿಶಾ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್, ಮಹಾವೀರ್ ಜೈನ್ ಎಜ್ಯುಕೇಶನ್ ಸೊಸೈಟಿ ಶ್ರೀ ಪಾರ್ಶ್ವನಾಥ ಇಂಗ್ಲೀಷ್ ಮೀಡಿಯಂ ಸ್ಕೂಲ್, ಎ.ಎಸ್.ಎಸ್. ಡಿ.ಎಸ್ ಕುರ್ತಕೋಟಿ ಮೆಮೋರಿಯಲ್ ಪಿ.ಯು ಕಾಲೇಜ್ ಆಫ್ ಕಾಮರ್ಸ್, ಬಾಲ ವಿನಾಯಕ ವಿದ್ಯಾನಿಕೇತನ, ಎಸ್.ಟಿ.ಎಸ್. ಕೆ.ಕೆ.ಎಸ್. ಪಾಲಿಟೆಕ್ನಿಕ್ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜ್ ಕ್ಯಾಂಪಸ್, ಕೆ.ಎಲ್.ಇ. ಸೊಸೈಟೀಸ್ ಸ್ಕೂಲ್, ಜೆ.ಟಿ ಕಾಲೇಜ್ ಕ್ಯಾಂಪಸ್.

### ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಜಿಲ್ಲಾಮಟ್ಟದ ಸಭೆ । ಕರಪತ್ರ ಬಿಡುಗಡೆ

# ಸ್ವಾಭಿಮಾನದಿಂದ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇದೇ ಮೇ 7ರಂದು ಜರುಗುವ ಲೋಕಸಭಾ ಚುನಾವಣೆಯಲ್ಲಿ ವಿವಿಧ ಪಕ್ಷಗಳು ಮುಗ್ಧ ಜನರಿಗೆ ಮದ್ಯ ಕುಡಿಸಿ ಮತ ಪಡೆಯುವ ಪ್ರಯತ್ನ ಮಾಡಬಹುದು. ಅಂತಹ ಪ್ರಯತ್ನಗಳು ಎಲ್ಲೇ ಆಗಲಿ, ಯಾರಿಂದಲೇ ಆಗಲಿ, ಅದನ್ನು ಬಲವಾಗಿ ವಿರೋಧಿಸಿ ಮದ್ಯಮುಕ್ತ ಚುನಾವಣೆಗೆ ಎಲ್ಲರೂ ಬೆಂಬಲಿಸೋಣ ಎಂದು ಅಖಿಲ ಕನಾಟಕ ಜಿಲ್ಲಾ ಜನಜಾಗೃತಿ ವೇದಿಕೆಯ ಜಿಲ್ಲಾ ಕಾರ್ಯದರ್ಶಿ ಮತ್ತು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಯೋಗೇಶ ಎ ಹೇಳಿದರು.

ಸ್ಥಳೀಯ ರಾಜೀವಗಾಂಧಿ ನಗರದ ಈಶ್ವರ ದೇವಸ್ಥಾನದಲ್ಲಿ ಶುಕ್ರವಾರ ಜರುಗಿದ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಜಿಲ್ಲಾಮಟ್ಟದ ಸಭೆಯಲ್ಲಿ 'ಮದ್ಯಮುಕ್ತ ಚುನಾವಣೆಗೆ ಬೆಂಬಲಿಸೋಣ' ಎಂಬ ಕರಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಪ್ರಜ್ಞಾವಂತ ನಾಗರಿಕರು ಮದ್ಯಪಾನದ ಆಮಿಷಕ್ಕೆ ಬಲಿಯಾಗಬಾರದು. ರಾಜಕೀಯ ಪಕ್ಷಗಳೂ ಮದ್ಯವನ್ನು ಹಂಚುವುದಿಲ್ಲ ಎನ್ನುವ ತೀರ್ಮಾನಕ್ಕೆ



ಬರಬೇಕು. ಹೆಂಡದ ಆಮಿಷಕ್ಕೆ ಬಲಿಯಾಗಿ ಮತ ಚಲಾಯಿಸಿದಲ್ಲಿ ಕೇವಲ ಹೆಂಡಕ್ಕಾಗಿ ನಮ್ಮನ್ನು ನಾವು ಮಾರಿಕೊಂಡಂತಾಗುತ್ತದೆ. ನಿಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಇಂತಹ ಪ್ರಯತ್ನಗಳು ನಡೆದಲ್ಲಿ ಜಾತಿ-ಮತ, ಪಕ್ಷಭೇದ ಮರೆತು ಸಾಮೂಹಿಕವಾಗಿ ಪ್ರತಿಭಟಿಸಬೇಕು. ಹೆಂಡದ ಆಮಿಷಕ್ಕೆ ಬಲಿಯಾಗದೆ ಸ್ವಾಭಿಮಾನವನ್ನು ಉಳಿಸಿಕೊಂಡು, ಯೋಚಿಸಿ ಮತ ಚಲಾಯಿಸಬೇಕು ಎಂದರು.

ಸಭೆಯಲ್ಲಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಜಿಲ್ಲಾ ಉಪಾಧ್ಯಕ್ಷ ಚಂದ್ರಶೇಖರ ಹುಣಸಿಕಟ್ಟಿ, ನಿಕಟ ಪೂರ್ವ ಅಧ್ಯಕ್ಷ ಪ್ರೊ. ಎಚ್.ಬಿ. ಅಸೂಟಿ, ಜಿ.ಪಂ ಮಾಜಿ ಸದಸ್ಯರಾದ ಶಿವಪ್ರಕಾಶ ಮಹಾಜನಶೆಟ್ಟರ, ವೇದಿಕೆಯ ಸದಸ್ಯರಾದ ಸರೋಜಾ ಘೋರ್ಪಡೆ, ಸ್ವಪ್ನಾ ರಾಯ್ಕರ, ಮಹಾಂತೇಶ ದಶಮನಿ, ಜಗದೀಶ ಕರಡಿ, ಜಯದೇವ ಭಟ್, ಗವಿಸಿದ್ದಯ್ಯ ಹಳ್ಳಿಕೇರಿಮಠ, ನಾಗೇಶ ಹುಬ್ಬಳ್ಳಿ, ಪಾಂಡುರಂಗ ಪತ್ತಾರ, ಪ್ರಕಾಶ ಮದ್ದಿನ, ಫಕೀರೇಶ ರಟ್ಟಿಹಳ್ಳಿ, ಎ.ಕೆ. ಮುಲ್ಲಾನವರ, ವೆಂಕಟೇಶ ಇಮರಾಪೂರ, ಶಿವಯೋಗಿ ಸವದತ್ತಿ, ದೇವೇಂದ್ರಪ್ಪ ಕಾಗನವರ, ತಾಲೂಕಾ ಯೋಜನಾಧಿಕಾರಿಗಳಾದ ಸುರೇಂದ್ರ ನಾಯಕ, ಮಹಾಬಲೇಶ್ವರ ಪಟಗಾರ, ಪುನೀತ್ ಓಲೆಕಾರ, ಜಗದೀಶ ಬಂಡಾರಿ, ವಿಶಾಲಾ ಮಲ್ಲಾಪುರ, ದಿನೇಶ ಶೆರಗಾರ, ಜಯಂತ ಕೆ., ನಾಗೇಶ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಇತ್ತೀಚೆಗೆ ನಿಧನರಾದ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಸದಸ್ಯ ಶಿರಹಟ್ಟಿಯ ವೈ.ಎಸ್. ಪಾಟೀಲ ಅವರ ಆತ್ಮಕ್ಕೆ ಶಾಂತಿ ಕೋರಿ ಮೌನಚರಣೆ ಸಲ್ಲಿಸಲಾಯಿತು.

> ಕರ್ನಾಟಕ ರಾಜ್ಯದಲ್ಲಿ ಉತ್ತಮ ಆಡಳಿತ ನಡೆಸಲು ಯೋಗ್ಯ ಜನಪ್ರತಿನಿಧಿಯನ್ನು ಆರಿಸಬೇಕು. ಮದ್ಯಮುಕ್ತ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸುತ್ತಿರುವ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಧ್ಯೇಯೋದ್ದೇಶಗಳನ್ನು ಬೆಂಬಲಿಸುವ ಯಾವುದೇ ಪಕ್ಷದ ಬೆಂಬಲಿತ ಅಭ್ಯರ್ಥಿಗಳಾದರೂ ಅಂತವರಿಗೆ ಮತ ಚಲಾಯಿಸಬೇಕು. ಸದೃಢ, ದುಶ್ಚಟ ರಹಿತ, ಪಾರದರ್ಶಕ ಆಡಳಿತವನ್ನು ರೂಪಿಸಲು ಎಲ್ಲರೂ ಮದ್ಯಮುಕ್ತ ಚುನಾವಣೆಗೆ ಬೆಂಬಲಿಸೋಣ ಎಂದು ಯೋಗೇಶ ಎ ಹೇಳಿದರು.

# ಬೀದಿ ಬದಿ ವ್ಯಾಪಾರಸ್ಥರ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವೀರೇಶ್ವರ ಗ್ರಂಥಾಲಯದ ಹತ್ತಿರವಿರುವ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯ ಜಾಗದಲ್ಲಿ ಹಾವೇರಿ-ಗದಗ ಲೋಕಸಭಾ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರನ್ನು ಬೆಂಬಲಿಸಿ ಸಭೆ ಆಯೋಜಿಸಲಾಗಿತ್ತು.

ಕಾಂಗ್ರೆಸ್ ಯುವ ಮುಖಂಡ ಕೃಷ್ಣಗೌಡ ಪಾಟೀಲ ಮಾತನಾಡಿ, ಮತದಾರರು ಜಾಗೃತರಾಗಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಬಯಸಿದ್ದಾರೆ ಎಂದು ಹೇಳಿದರು. ಸಂಘದ ಪ್ರಧಾನ ಕಾರ್ಯದರ್ಶಿ ಭಾಷಾಸಾಬ ಮಲ್ಲಸಮುದ್ರ ಮಾತನಾಡಿದರು.

ಸಭೆಯ ಅಧ್ಯಕ್ಷತೆಯನ್ನು ಮಾರುತಿ ಸೋಳಂಕಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಇರ್ಫಾನ ಡಂಬಳ, ಚಂದ್ರಕಾಂತ ಚವ್ಹಾಣ, ಮಕ್ತುಂಸಾಬ ನಾಲಬಂದ, ರಶೀದಾ ಬಾ. ನದಾಫ, ರೇಣುಕಾ ಹತ್ತಿವಾಲೆ, ಶ್ರೀನಿವಾಸ ಹೆನ್ನೂರು, ಎಸ್.ಎನ್. ಬಳ್ಳಾರಿ, ಅಬ್ಬು ಹುಯಿಲಗೋಳ, ಕಳಕಪ್ಪ ಪೋತಾ, ಆನಂದ ಕೋಳಿ, ಭೀಮಣ್ಣ ಕೋಳಿ, ಮಂಜುನಾಥ, ಬಸುರಾಜ ತಾವರೆ, ಹನಮಂತಪ್ಪ, ಶಿವಕುಮಾರ, ಫಾರೂಕ ಹುಬ್ಬಳ್ಳಿ, ಅಬ್ಬು ರಾಟಿ, ಶಿವಕುಮಾರ ಬಳ್ಳಾರಿ ಮುಂತಾದವರು ಪಾಲ್ಗೊಂಡಿದ್ದರು.

ಮಹಮ್ಮದಅಲಿ ಅತ್ತಾರ, ಮಾಬುಲಿ ಧಾರವಾಡ, ರಾಜು ರೋಣದ, ಮಂಜುನಾಥ ಕುರ್ತಕೋಟಿ, ಕುತ್ತೇಜಾ ದೊಡ್ಡಮನಿ, ದಾದು ಮುಂಡರಗಿ, ಮೆಹಬೂಬ ಹಣಗಿ ಹಾಜರಿದ್ದರು. ನವೀನ ಭಂಡಾರಿ ನಿರೂಪಿಸಿ ವಂದಿಸಿದರು.

## ಶ್ರೀ ಜ. ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ ನಗರದ ರೇಸ್‌ಕೋರ್ಸ್ ರಸ್ತೆಯ ಆನಚಿದರಾವ್ ವೃತ್ತದ ಬಳಿಯಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಸಭಾಂಗಣದಲ್ಲಿ ಮೇ 4ರ ಬೆಳಿಗ್ಗೆ 10 ಗಂಟೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭ ಜರುಗಲಿದೆ.

ಸಮಾಜದಲ್ಲಿ ಅತ್ಯುನ್ನತ ಸೇವೆಗೈದವರಿಗೆ ಸಂಸ್ಥೆಯಿಂದ ಕೊಡಮಾಡುವ 'ಶ್ರೀ ಜಗದ್ಗುರು ರೇಣುಕ ಸಿರಿ' ಪ್ರಶಸ್ತಿಯನ್ನು ಪ್ರಥಮ ಬಾರಿಗೆ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ಪ್ರದಾನ ಮಾಡಲಾಗುವುದು. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ಧಾರವಾಡದ ಡೀನ್ ಡಾ. ಎ.ಸಿ. ವಾಲಿ 'ಶ್ರೀ ಜಗದ್ಗುರು ರೇಣುಕರ ಕ್ರಾಂತಿಗಳು' ವಿಷಯವಾಗಿ ಉಪನ್ಯಾಸ ನೀಡುವರು. ಇದೇ ಸಂದರ್ಭದಲ್ಲಿ ಸಿದ್ಧಾಂತ ಶಿಖಾಮಣಿ (ರೇಣುಕ ಗೀತೆ) ಗ್ರಂಥ ಬಿಡುಗಡೆಗೊಳ್ಳಲಿದ್ದು, ಗ್ರಂಥ ಪರಿಚಯವನ್ನು ಶ್ರೀ ಬಸವೇಶ್ವರ ಕಾಲೇಜಿನ ವಿಶ್ರಾಂತ ಪ್ರಾಂಶುಪಾಲ ಡಾ. ಸಿ. ಶಿವಕುಮಾರಸ್ವಾಮಿ ಮಾಡುವರು. ತುಮಕೂರು ವಿ.ವಿ. ವಿಶ್ರಾಂತ ಪ್ರಾಧ್ಯಾಪಕಿ ಡಾ. ಮೀನಾಕ್ಷಿ ಖಂಡಿಮಠ 'ಆದಿ ಜಗದ್ಗುರು ಶ್ರೀ ರೇಣುಕರು ಮತ್ತು ವೀರಶೈವ ಸಿದ್ಧಾಂತ' ಕುರಿತು ಉಪನ್ಯಾಸ ನೀಡುವರು.

ಸಂದರ್ಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ವಿವಿಧ ವಿಶ್ವವಿದ್ಯಾಲಯಗಳಿಂದ ಅತ್ಯುನ್ನತ ಪದವಿ ಪಡೆದ ಮಹಾಮಹೋಪಾಧ್ಯಾಯರಿಗೆ, ವಿವಿಧ ಸ್ಪರ್ಧಾ/ಪರೀಕ್ಷೆಗಳಲ್ಲಿ ಅತ್ಯುನ್ನತ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರಶಂಸಾ ಪ್ರಮಾಣಪತ್ರ ಪ್ರದಾನ, ಸಂಸ್ಥೆಯ ಸಿಬ್ಬಂದಿಗೆ ಗುರುರಕ್ಷಾ ಕವಚ ಅನುಗ್ರಹಿಸುವ ಕಾರ್ಯಕ್ರಮ ನಡೆಯುವುದು. ಸಮಾರಂಭದಲ್ಲಿ ಸರ್ವರೂ ಪಾಲ್ಗೊಳ್ಳುವಂತೆ ಸಂಸ್ಥೆಯ ಅಧ್ಯಕ್ಷ ಯು.ಎಂ. ಬಸವರಾಜ ವಿನಂತಿಸಿದ್ದಾರೆ.

# ಕಾಂಗ್ರೆಸ್ ಯೋಜನೆಗಳು ಮನೆ ಮನೆಗೆ ತಲುಪಿವೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಕ್ರಾಂತಿಕಾರಕ ಕಾರ್ಯಕ್ರಮಗಳನ್ನು ಅನುಷ್ಠಾಗೊಳಿಸಿದೆ. ಈ ಹಿನ್ನೆಲೆಯಲ್ಲಿ ನಮ್ಮ ನಿರೀಕ್ಷೆ, ಅಪೇಕ್ಷೆಗೂ ಮೀರಿ ಮತಗಳ ಕ್ರೋಢೀಕರಣವಾಗಲಿವೆ ಎಂಬ ಭರವಸೆ ಮೂಡಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 14ನೇ ವಾರ್ಡಿನ ಟ್ಯಾಗೋರ್ ರಸ್ತೆಯಲ್ಲಿ ರವಿ ಕುಲಕರ್ಣಿ ನಿವಾಸದ ಆವರಣದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ನಡೆದ ಪ್ರಚಾರ ಸಭೆಯಲ್ಲಿ ಸಚಿವರು ಮಾತನಾಡಿದರು.

ದಲ್ಲಾಳಿ, ಮಧ್ಯವರ್ತಿಗಳ



ಸಹಾಯವಿಲ್ಲದೇ ಗ್ಯಾರಂಟಿ ಯೋಜನೆಗಳನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. 100ಕ್ಕೆ 99 ಜನರಿಗೆ ಯೋಜನೆಗಳನ್ನು ಮುಟ್ಟಿಸುವ ಮೂಲಕ ಬಡವರ ಆರ್ಥಿಕ ಸ್ಥಿತಿಯನ್ನು ಮೇಲೆತ್ತುವ ಕೆಲಸವಾಗುತ್ತಿದೆ. ಪ್ರತಿಯೊಂದು ಮನೆಗಳಲ್ಲಿ ಕಾಂಗ್ರೆಸ್ ಕಾರ್ಯಕ್ರಮ ತಲುಪಿರುವುದು ಜಾಗತಿಕ ದಾಖಲೆಯಾಗಲಿದೆ ಎಂದರು.

ಸುಶಿಕ್ಷಿತರು, ದೇಶದ ಬಗ್ಗೆ ಮಾತನಾಡುವವರು, ಪ್ರಜಾಪ್ರಭುತ್ವ ಉಳಿಸಬೇಕು ಎನ್ನುವವರು ಸೇರಿ ವಾರ್ಡಿನ ಪ್ರತಿಯೊಬ್ಬರೂ ಕಟಿಬದ್ಧರಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಅತ್ಯಧಿಕ ಮತಗಳನ್ನು ನೀಡುವ ಮೂಲಕ ಶಕ್ತಿ ನೀಡಿ ಎಂದು ಮನವಿ ಮಾಡಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ವೈದ್ಯರಾದ ಡಾ. ಪ್ಯಾರಲಿ ನೂರಾಣಿ, ನಗರಸಭೆ ಮಾಜಿ ಅಧ್ಯಕ್ಷ ಪೀರಸಾಬ್ ಕೌತಾಳ, ನಗರಸಭೆ ಮಾಜಿ ಸದಸ್ಯ ಶ್ರೀನಿವಾಸ ಹುಯಿಲಗೋಳ, ಮುಖಂಡರಾದ ಪ್ರಭು ಬುರಬುರೆ, ರವಿ ಕುಲಕರ್ಣಿ ಸೇರಿದಂತೆ ಹಲವಾರು ಮುಖಂಡರು ಇದ್ದರು.

# ನಿರುದ್ಯೋಗ ಸಮಸ್ಯೆ ತಾಂಡವವಾಡುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರದಲ್ಲಿ ಅಧಿಕಾರಕ್ಕೆ ಬರುವ ಮುನ್ನ ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ 10 ವರ್ಷಗಳ ಅವಧಿಯಲ್ಲಿ ಉದ್ಯೋಗ ಸೃಷ್ಟಿಯಾಗಿರುವುದು ಕೇವಲ ಬೆರಳೆಣಿಕೆಯಷ್ಟು ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ನಿರುದ್ಯೋಗದ ಪ್ರಮಾಣವು ದೇಶದ ಇತಿಹಾಸದಲ್ಲಿಯೇ ಅತಿ ಹೆಚ್ಚು ಪ್ರಮಾಣದಲ್ಲಿ ದಾಖಲಾದ ವರ್ಷ 2023 ಆಗಿದೆ. ಸರಾಸರಿ ಪ್ರಮಾಣದಲ್ಲಿ ನೋಡಿದರೆ ಶೇ. 8ಕ್ಕಿಂತ ಹೆಚ್ಚು ನಿರುದ್ಯೋಗವು ದೇಶದಲ್ಲಿದೆ. ಒಟ್ಟಾರೆ 18ರಿಂದ 59 ವರ್ಷಗಳ ಒಳಗಿನ ದುಡಿಯುವ ಜನರು ಶೇ. 5ಕ್ಕಿಂತ ಕಡಿಮೆ ಪ್ರಮಾಣದಲ್ಲಿ ಸರ್ಕಾರಿ ನೌಕರರಿದ್ದಾರೆ. ಇದೂ ಕೂಡ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಆದರೆ, ಅದಾನಿ, ಅಂಬಾನಿ ಹಾಗೂ ಕೆಲವು ಮಾಧ್ಯಮಗಳು ತಮ್ಮ ಹಿತಾಸಕ್ತಿಗಾಗಿ ದುಡಿಯುತ್ತಿರುವ ಮೋದಿ ಅವರನ್ನು ವಿಶ್ವಗುರು ಎಂದು ಸುಳ್ಳು ಹೇಳಿ ಜನರನ್ನು ನಂಬಿಸುವ ಕೆಲಸ ಮಾಡುತ್ತಿದೆ ಎಂದಿದ್ದಾರೆ. ಹಣದುಬ್ಬರ, ಬೆಲೆ ಏರಿಕೆಗಳನ್ನು ಕಳೆದು ನೋಡಿದರೆ ಜನರ ಕೈಯಲ್ಲಿ ಏನೂ ಉಳಿಯುತ್ತಿಲ್ಲ. ಅಕ್ಕಿ, ಬೇಳೆ, ಅಡುಗೆ ಎಣ್ಣೆ, ಔಷಧ, ಪೆಟ್ರೋಲ್, ಡೀಸೆಲ್, ಗ್ಯಾಸ್ ಎಲ್ಲವುಗಳ ಬೆಲೆ ಮಾತ್ರ ಎರಡು ಪಟ್ಟು, ಮೂರು ಪಟ್ಟು ಹೆಚ್ಚಾಗಿವೆ. ಆದರೆ ಕಾರ್ಮಿಕರ ದುಡಿಮೆ ಮಾತ್ರ ಕಡಿಮೆಯಾಗಿದೆ. ನಿರೀಕ್ಷೆ ಮಾಡಿದ್ದರಲ್ಲಿ ಶೇ. 60ರಷ್ಟು ಉದ್ಯೋಗಗಳೂ ಸೃಜನೆಯಾಗುತ್ತಿಲ್ಲ. ಒಂದರ್ಥದಲ್ಲಿ ಮುಂದಕ್ಕೆ ನಡೆಯುವ ಬದಲು ಹಿಂದಕ್ಕೆ ನಡೆಯುತ್ತಿದೆ. ಆದ್ದರಿಂದ, ಯುವ ಜನತೆ ಕಾಂಗ್ರೆಸ್‌ನ್ನು ಬೆಂಬಲಿಸಿ, ಆಶೀರ್ವದಿಸಬೇಕಿದೆ ಎಂದು ಅವರು ಮನವಿ ಮಾಡಿದ್ದಾರೆ.

# ಪಂಚಮಸಾಲಿ ಸಮಾಜದ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ನಮ್ಮ ಜಿಲ್ಲೆಯವರೇ ಆದ ಆನಂದಸ್ವಾಮಿ ಗಡ್ಡದೇವರಮಠ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದು, ಅವರನ್ನು ಆಶೀರ್ವದಿಸಿ ಎಂದು ಸಚಿವ ಎಚ್.ಕೆ. ಪಾಟೀಲ ಮನವಿ ಮಾಡಿದರು.

ನಗರದ ಎಪಿಎಂಸಿ ಆವರಣದಲ್ಲಿನ ಬಸಪ್ಪ ಬಡ್ನಿಯವರ ಜಾಗದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಪಂಚಮಸಾಲಿ ಸಮಾಜದವರ ಸಭೆಯಲ್ಲಿ ಅವರು ಮಾತನಾಡಿದರು. ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಅನಿಲ ಪಾಟೀಲ ಮಾತನಾಡಿದರು. ಮುಖಂಡರಾದ ಬಾಲಚಂದ್ರ ಭರಮಗೌಡ್ರ, ಅಜ್ಜನಗೌಡ ಪಾಟೀಲ, ಸಿ.ಕೆ. ಮಾಳಶೆಟ್ಟಿ, ಎಸ್.ಪಿ. ಬಳಿಗಾರ, ಕಲ್ಲಣ್ಣ ಮನಗುಂಡಿ, ಚನ್ನಪ್ಪಣ್ಣ ಜಗಲಿ, ಹಾಲಪ್ಪ ಅಮರಗೋಳ, ಬಸವರಾಜ ದೇಸಾಯಿ, ನಾಗರಾಜ ಹೊಂಬಳಗಟ್ಟಿ, ಮಹಾದೇವಪ್ಪ, ರುದ್ರಮ್ಮ ಕೆರಕಲಮಟ್ಟಿ, ನೀಲಮ್ಮ ಬೋಳನವರ, ಮೀನಾಕ್ಷಿ ಬೆನಕಣ್ಣವರ, ಲಲಿತಾ ಗೊಳಗೊಳಕಿ, ಜಾನಕಿ ಮಲ್ಲಾಪೂರ, ದ್ರಾಕ್ಷಾಯಿಣಿ ಕರಿಬಿಷ್ಠಿ, ವಿ.ಕೆ. ಮಟ್ಟಿ. ಚನ್ನವೀರಪ್ಪ ಮಳಗಿ, ಬಾಲಚಂದ್ರ ಭರಮಗೌಡ, ಶರಣು ಗೊಳಗೊಳಕಿ ಸೇರಿ ಪಂಚಮಸಾಲಿ ಸಮಾಜದ ಮುಖಂಡರು ಹಾಜರಿದ್ದರು.

### ಟಾಟಾ ಹಿಟಾಚಿ ಕೈಗಾರಿಕಾ ಪ್ರದೇಶದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

# ಮೇ 7ರಂದು ಕಡ್ಡಾಯವಾಗಿ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮೇ 7ರಂದು ಧಾರವಾಡ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮತದಾನ ಪ್ರಕ್ರಿಯೆ ನಡೆಯಲಿದೆ. ಅಂದು ಕಾರ್ಮಿಕರಿಗೂ ಸಹ ವೇತನ ಸಹಿತ ರಜೆ ನೀಡಲಾಗಿದೆ. ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಹೇಳಿದರು.

ಶುಕ್ರವಾರ ಬೇಲೂರ ಕೈಗಾರಿಕಾ ಪ್ರದೇಶದಲ್ಲಿರುವ ಟಾಟಾ ಸಮೂಹದ ಟಾಟಾ ಹಿಟಾಚಿ ಕೈಗಾರಿಕಾ ಪ್ರದೇಶದ ಕೇಂದ್ರದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ ಪ್ರಯುಕ್ತ ಧಾರವಾಡ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸ್ವೀಪ್




ಚಟುವಟಿಕೆಗಳ ಮುಖಾಂತರ ಮತದಾನದ ಶೇಕಡಾ ಪ್ರಮಾಣ ಹೆಚ್ಚಿಸಲು ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಎಲ್ಲರೂ ತಮ್ಮ ಜವಾಬ್ದಾರಿಯನ್ನು ಅರಿತು ಮತ ಚಲಾಯಿಸಬೇಕು. ಯಾವುದೇ ಅರ್ಹ ಮತದಾರರು ಮತದಾನದಿಂದ ವಂಚಿತರಾಗಬಾರದು ಎಂದು ಕರೆ ನೀಡಿದರು.

ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ್ ಮಾತನಾಡಿ, ಚುನಾವಣೆಯ ಕುರಿತು ತಾವೆಲ್ಲರೂ ಚುನಾವಣಾ ಆಯೋಗದ ರಾಯಭಾರಿಗಳಾಗಿ ತಮ್ಮ ಮನೆಯಲ್ಲಿ, ಅಕ್ಕಪಕ್ಕದ ಮನೆಯವರಿಗೆ ಹಾಗೂ ಸಂಬಂಧಿಕರು ಕಡ್ಡಾಯವಾಗಿ ಮತದಾನ ಮಾಡಿರುವ ಕುರಿತು ಖಚಿತಪಡಿಸಿ ಕೊಳ್ಳಬೇಕು ಎಂದರಲ್ಲದೆ, ಕಡಿಮೆ ಮತದಾನವಾಗಿರುವ ಸ್ಥಳಗಳಲ್ಲಿ ಶೇಕಡಾವಾರು ಹೆಚ್ಚಿನ ಮತದಾನ ಆಗಬೇಕೆಂದು ಸೂಚಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಉಪಾಧ್ಯಕ್ಷ ಕಾಮತ್ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಶಿವಪುತ್ರಪ್ಪ, ಟಾಟಾ ಹಿಟಾಚಿಯ ಸುರಕ್ಷತೆ ಹಾಗೂ ಆಡಳಿತ ವಿಭಾಗದ ಮುಖ್ಯಸ್ಥ ಪ್ರಶಾಂತ ದೀಕ್ಷಿತ್, ಕೆ.ಎಮ್. ಶೇಖ್ ಸೇರಿದಂತೆ ಇತರರು ಹಾಜರಿದ್ದರು.

# ಶಿಕ್ಷಕ ಕುಟುಂಬದ ಕ್ಷೇಮ ವಿಚಾರಿಸಿದ ಹೊರಟ್ಟಿ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇತ್ತೀಚೆಗೆ ಹುಬ್ಬಳ್ಳಿ-ಗದಗ ನಡುವಿನ ಇಂಗಳಹಳ್ಳಿ ಕ್ರಾಸ್ ಬಳಿ ಕಾರು ಮತ್ತು ಟೆಂಪೋ ನಡುವೆ ಭೀಕರ ತೀವ್ರ ಅಪಘಾತ ಸಂಭವಿಸಿತ್ತು. ಕಾರಿನಲ್ಲಿದ್ದ ಕಲಘಟಗಿ ತಾಲೂಕಿನ ತಾವರಗೇರಿಯ ಕಲ್ಮೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಲೋಕನಾಥ್ ಗಾರವಾಡ, ಶಾಂತಾ ಗಾರವಾಡ (ಸೊಬಗಿನ), ಸರಕಾರಿ ಪ.ಪೂ ಕಾಲೇಜಿನ ಉಪನ್ಯಾಸಕಿ ಅನ್ನಪೂರ್ಣ ಎಂ. ಸೊಬಗಿನ ಕುಟುಂಬದವರು ತೀವ್ರ ಗಾಯಗೊಂಡು ಹುಬ್ಬಳ್ಳಿಯ ಕೆ.ಎಂ.ಸಿಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಂಗತಿಯನ್ನು ತಿಳಿದ ಸಭಾಪತಿ ಬಸವರಾಜ್ ಹೊರಟ್ಟಿಯವರು ತಕ್ಷಣ ಕೆ.ಎಂ.ಸಿಗೆ ಧಾವಿಸಿ ಸದರಿಯವರ ಯೋಗಕ್ಷೇಮವನ್ನು ವಿಚಾರಿಸಿ ಧೈರ್ಯ ತುಂಬಿದರು.

ತಜ್ಞ ವೈದ್ಯರ ಮೂಲಕ ಸಾಧ್ಯವಾದಷ್ಟು ಚಿಕಿತ್ಸೆ ನೀಡಿ ಬೇಗ ಗುಣಮುಖರಾಗುವಂತೆ ನೋಡಿಕೊಳ್ಳಬೇಕು ಎಂದು ಕೆಎಂಸಿಐ ಮುಖ್ಯಸ್ಥರಿಗೆ ಹೊರಟ್ಟಿ ಸೂಚಿಸಿದರು. ಈ ಸಂದರ್ಭದಲ್ಲಿ ಜಿ.ಆರ್. ಭಟ್, ರೇಷ್ಮೆ, ಕುಮಾರ್, ಎಸ್.ಆರ್. ರಾಚಣ್ಣವರ್, ಕಮ್ಮಾರ್ ಮುಂತಾದವರು ಉಪಸ್ಥಿತರಿದ್ದರು.

# ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಪ್ರಕೋಷ್ಠಗಳು ಶ್ರಮಿಸಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆ ಚುನಾವಣೆ ಪಕ್ಷದ ಪ್ರಕೋಷ್ಠಗಳಿಗೂ ಪರೀಕ್ಷೆಯಾಗಿದ್ದು, ಎಲ್ಲ ಪ್ರಕೋಷ್ಠಗಳು ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಶ್ರಮಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಗದಗ ನಗರದಲ್ಲಿ ರಾಜ್ಯ ಬಿಜೆಪಿ ವಿವಿಧ ಪ್ರಕೋಷ್ಠಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಒಂದು ದೇಶ, ರಾಜ್ಯ ಅಭಿವೃದ್ಧಿ ಹೊಂದಬೇಕೆಂದರೆ ಎಲ್ಲ ವೃತ್ತಿಯವರು ಕೆಲಸ ಮಾಡಿದಾಗ ಮಾತ್ರ ಸಾಧ್ಯ. ಸರ್ಕಾರ ಮತ್ತು ಎಲ್ಲ ವೃತ್ತಿ ಬಾಂಧವರ ನಡುವೆ ಸೇತುವೆಯಾಗಿ ಕೆಲಸ ಮಾಡಲು ಪ್ರಕೋಷ್ಠಗಳನ್ನು ಮಾಡಿದೆ. ಎಲ್ಲ




ಪ್ರಕೋಷ್ಠಗಳು ಸಕ್ರಿಯವಾಗಿ ಕೆಲಸ ಮಾಡಿ, ಪಕ್ಷಕ್ಕೆ ಹೆಚ್ಚಿನ ಮತ ಹಾಕುವಂತೆ ನೋಡಿಕೊಳ್ಳಬೇಕು ಎಂದರು.

ಈ ರೀತಿಯ ಪ್ರಕೋಷ್ಠಗಳು ಬೇರೆ ಪಕ್ಷದಲ್ಲಿ ಇಲ್ಲ. ಅವರು ನಿಮ್ಮ ವೃತ್ತಿಗಳ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ಉದಾಹರಣೆಗೆ ವೈದ್ಯರ ಪ್ರಕೊಷ್ಠ ವೈದ್ಯರ ಸಮಸ್ಯೆ ಇದ್ದಾಗ ಅದನ್ನು ನಮ್ಮ ಪ್ರಕೊಷ್ಠ ವಿವರವಾಗಿ ಸರ್ಕಾರಕ್ಕೆ ಮಾಹಿತಿ ನೀಡಬೇಕು. ಬಿಜೆಪಿ ಗೆದ್ದರೆ ನಿಮ್ಮ ವೃತ್ತಿಗಳು ಸುರಕ್ಷಿತವಾಗಿರುತ್ತವೆ. ನರೇಂದ್ರ ಮೋದಿಯವರು ಎಲ್ಲರ ಬಗ್ಗೆ ಯೋಚಿಸುತ್ತಾರೆ. ಅವರು ಬೀದಿ ಬದಿ ವ್ಯಾಪಾರಿಗಳ ಬಗ್ಗೆ ಚಿಂತನೆ ಮಾಡಿ ಅವರಿಗೆ ಆರ್ಥಿಕ ನೆರವು ನೀಡಿದರು. ಸುಮಾರು 18 ವೃತ್ತಿಗಳಿಗೆ ನೆರವು ನೀಡುವ ವಿಶ್ವ ಕರ್ಮ ಯೋಜನೆ ಜಾರಿ ಮಾಡಿದರು. ಎಪಿಎಂಸಿ ವ್ಯಾಪಾರಸ್ಥರು, ಮೀನುಗಾರರು, ವಿದೇಶಿ ಕಂಪನಿಗಳ ದಾಳಿಯಾದಾಗ ಸಣ್ಣ ವ್ಯಾಪಾರಸ್ಥರನ್ನು ರಕ್ಷಣೆಯನ್ನು ಬಿಜೆಪಿ ಮಾಡಿದೆ.

ಈ ಚುನಾವಣೆ ಪ್ರಕೋಷ್ಠಗಳಿಗೂ ಪರೀಕ್ಷೆ. ಮೋದಿಯವರ ಅಲೆ ಇದೆ. ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುವುದು ಖಚಿತ. ಅದಕ್ಕಾಗಿ ಎಲ್ಲರೂ ಪ್ರಾವಾಣಿಕವಾಗಿ ಕೆಲಸ ವಾಡುವಂತೆ ಹೇಳಿದರು.

ಸಭೆಯಲ್ಲಿ ಪ್ರಕೋಷ್ಠಗಳ ರಾಜ್ಯ ಸಂಯೋಜಕ ದತ್ತಾತ್ರೆಯ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹಾಜರಿದ್ದರು.


### ರಸಗೊಬ್ಬರ, ಕೀಟನಾಶಕ ಒದಗಿಸುವ ಕಂಪನಿಗಳೊಂದಿಗೆ ಕೆವಿಕೆಯಲ್ಲಿ ಚರ್ಚೆ

# ರೈತರು ಯೋಜನೆಯ ಲಾಭ ಪಡೆಯಿರಿ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ನೆಲ ಮತ್ತು ಜಲ ನಿರ್ವಹಣೆ ಸಂಸ್ಥೆ (ವಾಲ್ಮಿ) ಧಾರವಾಡ, ಕರ್ನಾಟಕ ನೀರಾವರಿ ನಿಗಮ ನಿ. ಗದಗ, ಎಂ.ಇ.ಐ.ಎಲ್ ಮತ್ತು ನೆಟಾಫಿಮ್ ಸಹಯೋಗದಲ್ಲಿ ಸಿಂಗಟಾಲೂರ ಸಮುದಾಯ ಹನಿ ನೀರಾವರಿ ಯೋಜನೆಗಳಲ್ಲಿ ಕೃಷಿಗೆ ಅಗತ್ಯವಿರುವ ಸಾಮಾಗ್ರಿಗಳಾದ ರಸಗೊಬ್ಬರ, ಬೀಜ ರೋಗ ಮತ್ತು ಕೀಟನಾಶಕಗಳನ್ನು ಒದಗಿಸುವ ಕಂಪನಿಗಳ ಪಾತ್ರ ಮತ್ತು ಭಾಗವಹಿಸುವಿಕೆಯ ಕುರಿತು ಹುಲಕೋಟಿಯ ಕೆ.ಎಚ್. ಪಾಟೀಲ್ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇತ್ತೀಚೆಗೆ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಭೆಯ ಅಧ್ಯಕ್ಷತೆಯನ್ನು ವಾಲ್ಮಿ ಸಂಸ್ಥೆಯ ನಿರ್ದೇಶಕ ಡಾ.




ರಾಜೇಂದ್ರ ಪೊದ್ದಾರ ಮತ್ತು ಕ.ನೀ.ನಿ.ನಿ. ಮುಂಡರಗಿಯ ಮುಖ್ಯ ಕಾರ್ಯ ನಿರ್ವಾಹಕ ಅಭಿಯಂತರ ಐ. ಪ್ರಕಾಶ ವಹಿಸಿದ್ದರು.

ಸಿಂಗಟಾಲೂರು ಏತ/ಹನಿ ನೀರಾವರಿ ಯೋಜನೆ ಪ್ಯಾಕೇಜ್-1 & 3ರಲ್ಲಿ ಪ್ರಸಕ್ತ 2024ರ ಮುಂಗಾರು ಹಂಗಾಮಿನಲ್ಲಿ ನೀರಾವರಿಯನ್ನು ಒದಗಿಸಲಾಗುತ್ತಿದ್ದು, ಅದರ ಅವಕಾಶಗಳ ಕುರಿತು ಕೃಷಿಗೆ ಅಗತ್ಯವಿರುವ ಸಾಮಾಗ್ರಿಗಳನ್ನು ಒದಗಿಸುವ ಕಂಪನಿಗಳೊಂದಿಗೆ ಚರ್ಚಿಸಲಾಯಿತು. ಸಭೆಯ ಮುಖ್ಯ ಉದ್ದೇಶವನ್ನು ನೆಟಾಫಿಮ್ ಸಹಾಯಕ ಜನರಲ್ ಮ್ಯಾನೇಜರ್ ಗಿರೀಶ ದೇಶಪಾಂಡೆ ವಿವರಿಸಿದರು.

ಸುರೇಶ ಕುಲಕರ್ಣಿ ಮಾತನಾಡಿ, ಸರ್ಕಾರ ಕೈಗೊಂಡ ಹನಿ ನೀರಾವರಿ ಯೋಜನೆಗಳನ್ನು ಈ ಎರಡು ಯೋಜನೆಗಳಲ್ಲಿ ಒಟ್ಟು 41 ನೀರು ಬಳಕೆದಾರರ ಸಹಕಾರಿ ಸಂಘಗಳು ಕಾರ್ಯನಿರ್ವಹಿಸುತ್ತಿವೆ. ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಏಜೆನ್ಸಿ ಮತ್ತು ಕೃಷಿಗೆ ಅಗತ್ಯವಿರುವ ಸಾಮಾಗ್ರಿಗಳನ್ನು ಒದಗಿಸುವ ಕಂಪನಿಗಳ ಜೊತೆಗೂಡಿ ರೈತರು ಈ ಯೋಜನೆಯ ಲಾಭ ಪಡೆಯಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಕ.ನೀ.ನಿ.ನಿ. ಸಹಾಯಕ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ, ಎಚ್. ನಾಗರಾಜ್, ರಮೇಶ, ಲಕ್ಷ್ಮಣ, ಎನ್.ಎಚ್. ಭಂಡಿ ಉಪಸ್ಥಿತರಿದ್ದರು. ಸಿಂಜೆಂಟಾ, ಟ್ರಾಪಿಕೂಲ್ ಫುಡ್ಸ್, ಕ್ರಿಯಾಜೆನ್, ಜುವಾರಿ ಫಾರ್ಮ ಹಬ್, ಅಡಾಸ್ಕಾ, ಮಂಗಳೂರು ಕೆಮಿಕಲ್ & ಫರ್ಟಿಲೈಜರ್ (ಒಅಈ), ಸ್ಪಿಕ್ ಫರ್ಟಿಲೈಜರ್ ಮತ್ತು ವೆರ್ದೆಸಿಯನ್ ಲೈಫ್ ಸೈನ್ಸ್ (ಸೈಟೋಜೈಮ್) ಪ್ರತಿನಿಧಿಗಳು, ನೇಟಾಫಿಮ್ ಯೋಜನಾ ವ್ಯವಸ್ಥಾಪಕರು ಮತ್ತು ಬೇಸಾಯ ತಜ್ಞರು ಭಾಗವಹಿಸಿದ್ದರು.

## 6ನೇ ತರಗತಿ ಸೇರ್ಪಡೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು 6ನೇ ತರಗತಿಗೆ ದಾಖಲಿಸುವ ಕುರಿತು ಅರ್ಹ ಬಾಲಕ/ಬಾಲಕಿಯರಿಂದ ಅರ್ಜಿಗಳನ್ನು ಕರೆಯಲಾಗಿದೆ.

ಅಭ್ಯರ್ಥಿಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಾಗಿರಬೇಕು. ಅರ್ಜಿಯ ಜೊತೆಗೆ ಹೆಚ್ಚುವರಿಯಾಗಿ 2 ಭಾವಚಿತ್ರ ಲಗತ್ತಿಸುವುದು. ಪ್ರಸ್ತುತ ವರ್ಷ 6ನೇ ತರಗತಿಗೆ ಪ್ರವೇಶ ಪಡೆಯಲು 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚಿನ ಅಂಕ ಗಳಿಸಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮಿತಿಯೊಳಗೆ ಇರಬೇಕು. ವಿದ್ಯಾರ್ಥಿಗಳ ಜಾತಿ, ಆದಾಯ ಪ್ರಮಾಣಪತ್ರ ಮತ್ತು ಅಂಕಪಟ್ಟಿಗಳ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಲಿಖಿತ ಪ್ರವೇಶ ಪರೀಕ್ಷೆ ನಡೆಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಅರ್ಜಿ ಸಲ್ಲಿಸಲು ಕೊನೆಯ ದಿನ ಮೇ 21 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ-ಗದಗ, ದೂರವಾಣಿ-08372-231828 ಸಂಪರ್ಕಿಸಬಹುದಾಗಿದೆ.

## ಬಸವರಾಜ ಬೊಮ್ಮಾಯಿ ಪರ ಪ್ರಚಾರ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇಡೀ ಜಗತ್ತಿಗೆ ಭಾರತ ವಿಶ್ವಗುರುವಾಗಿ ಹೊಮ್ಮುತ್ತಿರುವುದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ಜನಪ್ರಿಯತೆ ಕಾರಣವಾಗಿದ್ದು, ಅವರನ್ನು 3ನೇ ಬಾರಿಗೆ ಪ್ರಧಾನಿಯಾಗಿಸುವುದಕ್ಕಾಗಿ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರಿಗೆ ಮತ ನೀಡಬೇಕೆಂದು ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ವಿನಂತಿಸಿದರು.

ಅವರು ಸಮೀಪದ ಖಾನಾಪೂರ ಗ್ರಾಮದಲ್ಲಿ ಕಾರ್ಯಕರ್ತರೊಂದಿಗೆ ಮನೆ ಮನೆಗೆ ತೆರಳಿ ಬಿಜೆಪಿ ಸರಕಾರದ ಸಾಧನೆಯ ಕರಪತ್ರ ವಿತರಿಸಿ ಬಸವರಾಜ ಬೊಮ್ಮಾಯಿ ಪರ ಮತಯಾಚನೆ ನಡೆಸಿ ಮಾತನಾಡಿದರು.

ಬಸವರಾಜ ಬೊಮ್ಮಾಯಿ ಅವರು ಶಾಸಕರಾಗಿ, ಪರಿಷತ್ ಸದಸ್ಯರಾಗಿ, ನೀರಾವರಿ, ಕಾನೂನು ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿಯೂ ಜನತೆಯ ಸೇವೆ ಸಲ್ಲಿಸಿದ್ದಾರೆ. ಮೇ.7ರಂದು ನಡೆಯಲಿರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಬಸವರಾಜ ಬೊಮ್ಮಾಯಿ ಅವರ ಕಮಲದ ಗುರುತಿಗೆ ಮತ ನೀಡಬೇಕು. ಅವರು ಅತ್ಯಧಿಕ ಮತಗಳ ಅಂತರದಿಂದ ಗೆಲುವು ಸಾಧಿಸಿ ಕೇಂದ್ರದ ಮಂತ್ರಿಯಾಗಿ ಕ್ಷೇತ್ರದ ಅಭಿವೃದ್ಧಿ ಕೈಗೊಳ್ಳಲು ಸಹಕರಿಸಬೇಕು ಎಂದರು.

ಯಲ್ಲಪ್ಪ ಇಂಗಳಗಿ, ಸುರೇಶ ಅಕ್ಕಿ, ಬಸವರಾಜ ವಡವಿ, ಅಕ್ಬರಸಾಬ ಯಾದಗಿರಿ, ರಾಮಣ್ಣ ಕಂಬಳಿ, ರಾಜು ಹಲಸೂರ, ಶ್ರೀನಿವಾಸ ಬಾರಬಾರ ಮುಂತಾದವರು ಉಪಸ್ಥಿತರಿದ್ದರು.

## ತ್ಯಾಜ್ಯ ನೀರಿನಿಂದ ವಿದ್ಯುತ್ ಉತ್ಪಾದನಾ ಯಂತ್ರ ಸಂಶೋಧನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಮ್ಮ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನ ಮೆಕ್ಯಾನಿಕಲ್ ವಿಭಾಗದ ವಿದ್ಯಾರ್ಥಿಗಳು ತ್ಯಾಜ್ಯ ನೀರನ್ನು ಬಳಸಿಕೊಂಡು ವಿದ್ಯುತ್ ಉತ್ಪಾದಿಸುವ ನೂತನ ಯಂತ್ರವನ್ನು ಸಂಶೋಧಿಸಿದ್ದಾರೆ.

ವಿದ್ಯಾರ್ಥಿಗಳಾದ ರಾಹುಲ್ ವೆರ್ಣೇಕರ್, ಸಚಿನ್ ಪಿಳ್ಳಿ, ಆದಿತ್ಯ ಅಗಡಿ, ಮಹೇಶ ಕಾಮರೆಡ್ಡಿ ಅವರು ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾದ ಡಾ.ದೇವೇಂದ್ರ ಕೆ. ಅವರ ಮಾರ್ಗದರ್ಶನದಲ್ಲಿ ಪೋರ್ಟಬಲ್ ಟರ್ಬೈನ್ ಪ್ರೊಜೆಕ್ಟ್ ಯಂತ್ರವನ್ನು ಸಂಶೋಧಿಸಿದ್ದಾರೆ.

ಈ ಕುರಿತು ಕಾಲೇಜಿನ ಪ್ರಾಚಾರ್ಯ ಡಾ.ಪರಶುರಾಮ ಬಾರಕಿ ಮಾತನಾಡಿ, ತ್ಯಾಜ್ಯ ನೀರನ್ನು ಉಪಯೋಗಿಸಿ ವಿದ್ಯುತ್ ತಯಾರಿಸುವ ಮಾದರಿ ಯಂತ್ರವನ್ನು ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಸಂಶೋಧಿಸಿದ್ದಾರೆ. ಈಗಾಗಲೇ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯು 2023-24ನೇ ಸಾಲಿನ ಉತ್ತಮ ಪ್ರೊಜೆಕ್ಟ್‌ಗಾಗಿ ನೀಡುವ ಪ್ರೋತ್ಸಾಹ ಧನಕ್ಕೆ ಈ ಯಂತ್ರ ಆಯ್ಕೆ ಆಗಿದೆ. ಇಂಜಿನಿಯರಿಂಗ್ ವಿದ್ಯಾರ್ಥಿಗಳು ಇದೇ ರೀತಿ ತಮ್ಮ ಅಧ್ಯಯನದಲ್ಲಿ ಸಂಶೋಧನೆ, ಕ್ರಿಯಾತ್ಮಕತೆ, ಸೃಜನಶೀಲತೆಯನ್ನು ಬೆಳೆಸಿಕೊಳ್ಳಬೇಕು ಎಂದರು. ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿಗಳು ಇದ್ದರು.

### 'ವೈರಾಗ್ಯನಿಧಿ ಅಕ್ಕಮಹಾದೇವಿ ಜಯಂತಿ' ಕಾರ್ಯಕ್ರಮದಲ್ಲಿ ಸುಧಾ ಹುಚ್ಚಣ್ಣವರ ಅಭಿಪ್ರಾಯ

## ಅಕ್ಕನ ವಚನಗಳು ಬದುಕಿನ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಬಸವಣ್ಣನವರ ಪ್ರಭಾವಕ್ಕೆ ಒಳಗಾದ ಶರಣ-ಶರಣೆಯರಲ್ಲಿ ಅಕ್ಕಮಹಾದೇವಿಯವರು ಪ್ರಮುಖರಾಗಿದ್ದಾರೆ. ಅಕ್ಕ ದಿಟ್ಟತನದ ವ್ಯಕ್ತಿತ್ವ ತೋರಿದ ಆಧ್ಯಾತ್ಮಿಕ ಕ್ಷೇತ್ರದ ಧ್ರುವತಾರೆಯಾಗಿ, ಕನ್ನಡದ ಮೊಟ್ಟಮೊದಲ ವಚನಕಾರ್ತಿಯಾಗಿ ಹಲವು ಸಂಕಷ್ಟಗಳನ್ನು ಮೀರಿ ಮೌಲ್ಯಯುತ ಸಂದೇಶಗಳನ್ನು ಈ ಜಗತ್ತಿಗೆ ನೀಡಿದ್ದಾಳೆ ಎಂದು ಶಿರಹಟ್ಟಿಯ ಎಫ್.ಎಂ. ಡಬಾಲಿ ಕಾಲೇಜಿನ ಉಪನ್ಯಾಸಕಿ ಶರಣೆ ಸುಧಾ ಎ.ಹುಚ್ಚಣ್ಣವರ ಅಭಿಪ್ರಾಯಪಟ್ಟರು.

ಅವರು ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಬಸವದಳ ಗದಗ-ಬೆಟಗೇರಿ, ಜಿಲ್ಲಾ, ತಾಲೂಕಾ ಶರಣ ಸಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭೆ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ 'ವೈರಾಗ್ಯನಿಧಿ ಅಕ್ಕಮಹಾದೇವಿ ಜಯಂತಿ' ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ಅಕ್ಕನ ಪ್ರತಿಯೊಂದು ವಚನದಲ್ಲಿ ಜೀವನದ ಮಾರ್ಮಿಕ ನುಡಿ ಇದೆ. ಚೆನ್ನಮಲ್ಲಿಕಾರ್ಜುನ ದೇವರ ಕಾಣುವ ಆತುರವಿದೆ. ಸಾರ್ಥಕ ಬದುಕಿಗೆ ಅಕ್ಕನ ವಚನಗಳು ದಾರಿದೀಪವಾಗಿವೆ. ಅಲ್ಲದೇ ಬದುಕಿನ ಅಂತರಾಳವನ್ನು ಅರಿಯುವ ತವಕವಿದೆ ಮತ್ತು ಅಕ್ಕಮಹಾದೇವಿಯ ದಿವ್ಯ ವ್ಯಕ್ತಿತ್ವ ಇಡೀ ಹೆಣ್ಣು ಕುಲದ ಗೌರವದ ಸಂಕೇತವಾಗಿದೆ ಎಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಶರಣ ಕೆ. ಎಸ್. ಚೆಟ್ಟಿ ಹಾಗೂ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಶರಣೆ ಪ್ರೇಮಾ ಮೇಟಿ ಮಾತನಾಡಿದರು.

ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶರಣೆ ಸುಲೋಚನಾ ಎಂ.ಐಹೊಳಿ ವಚನ ಪ್ರಾರ್ಥನೆ ಮಾಡಿದರು. ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ಸ್ವಾಗತಿಸಿದರು. ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಶರಣ ಪ್ರಕಾಶ ಅಸುಂಡಿ ಶರಣು ಸಮರ್ಪಣೆಗೈದರೆ, ಶರಣೆ ಮಂಗಳಾ ಬಿ.ಕಾಮಣ್ಣವರ ಕಾರ್ಯಕ್ರಮ ನಿರೂಪಿಸಿದರು.

ಸಮಾರಂಭದಲ್ಲಿ ಸಂಘಟನೆಗಳ ಸದಸ್ಯರಾದ ಗಿರಿಜಕ್ಕ ಧರ್ಮರಡ್ಡಿ, ಗೌರಕ್ಕ ಬಡಿಗಣ್ಣವರ, ಗಂಗಮ್ಮ ಹೂಗಾರ, ಮಂಜುಳಾ ಹಾಸಿಲಕರ, ಸರೋಜಕ್ಕ ಲಿಂಗಧಾಳ, ಜಯಶ್ರೀ ಹಳ್ಳಿಕೇರಿ, ಶಾಂತಕ್ಕ ಮುಂದಿನಮನಿ, ಮಂಜುಳಾ ಅಕ್ಕಿ, ವೀಣಾ ತಿರ್ಲಾಪೂರ, ಪುಷ್ಪಾ ಭಂಡಾರಿ, ಸುರೇಖಾ ಪಿಳ್ಳೆ, ಅಕ್ಕಮಹಾದೇವಿ ಚೆಟ್ಟಿ, ರೇಣಕ್ಕ ಹಾಸಿಲಕರ, ಗಾಳಪ್ಪನವರ, ಜಿನಗಾ, ಶರಣರಾದ ಎಸ್.ಎನ್. ಹಕಾರಿ, ಎಸ್.ಎ. ಮುಗದ, ಮೃತ್ಯುಂಜಯ ಜಿನಗಾ, ರಾಮಣ್ಣ ಕಳ್ಳಿಮನಿ, ಬಿ.ವಿ. ಕಾಮಣ್ಣವರ, ಎನ್.ಎಸ್. ಬಡಿಗಣ್ಣವರ, ಎಸ್.ಎಂ. ಕವಳಿಕಾಯಿ, ಎಸ್.ಬಿ. ಸೋಮಗೊಂಡ, ರಾಚಪ್ಪ ಚವಡಿ ಮುಂತಾದವರು ಭಾಗವಹಿಸಿದ್ದರು.

ಅಧ್ಯಕ್ಷತೆ ವಹಿಸಿದ್ದ ಶರಣ ವಿ.ಕೆ. ಕರೇಗೌಡ್ರ ಮಾತನಾಡಿ, ಶರಣೆ ಅಕ್ಕಮಹಾದೇವಿಯ ವಚನಗಳು ಸರ್ವಕಾಲಕ್ಕೂ ಉತ್ಸಾಹವನ್ನು ತುಂಬುವ, ಜೀವನ ಸಾರ್ಥಕಪಡಿಸಿಕೊಳ್ಳುವ ಚಿಲುಮೆಗಳಾಗಿವೆ. ಪ್ರತಿಯೊಬ್ಬರೂ ಬಸವಾದಿ ಶಿವಶರಣರ ವಚನಗಳನ್ನು ಅರಿತು, ಆಚರಿಸಿದಾಗ ಮಾತ್ರ ವಚನಗಳ ಮೌಲ್ಯ ಗೊತ್ತಾಗುತ್ತದೆ ಎಂದರು.

## ಗಡ್ಡದೇವರಮಠ ಪರವಾಗಿ ರೋಡ್ ಶೋ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜಿ.ಎಸ್. ಪಾಟೀಲ ನೇತೃತ್ವದಲ್ಲಿ ರೋಡ್ ಶೋ ಮೂಲಕ ಕಾಂಗ್ರೆಸ್ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ಕಾರ್ಯಕರ್ತರು ಪಟ್ಟಣದಲ್ಲಿ ಮತಯಾಚನೆ ಮಾಡಿದರು.

ಪಟ್ಟಣದ ಮೈಸೂರ ಮಠದಿಂದ ಅಗಸಿಬಾಗಿಲು ಮೂಲಕ ಹಿರೇಬಜಾರ, ಕಟ್ಟಿಬಸವೇಶ್ವರ ರಂಗಮಂದಿರ ಕೊಳ್ಳಿಯವರ ಕತ್ರಿ, ಭಜರಂಗ ವೃತ್ತ, ದುರ್ಗಾ ಸರ್ಕಲ್‌ನಲ್ಲಿ ಸಭೆಯಾಗಿ ಮಾರ್ಪಟ್ಟಿತ್ತು. ರೋಡ್ ಶೋ ಉದ್ದಕ್ಕೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಸಿಎಂ ಸಿದ್ದರಾಮಯ್ಯ, ರಾಹುಲ್ ಗಾಂಧಿ, ಶಾಸಕ ಜಿ.ಎಸ್. ಪಾಟೀಲ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಜಯವಾಗಲಿ ಎಂದು ಘೋಷಣೆಗಳನ್ನು ಕೂಗಿದರು.



ಇದಕ್ಕೂ ಮುನ್ನ ರೋಡ್ ಶೋ ಸಂಚರಿಸುವ ಮಾರ್ಗದ ಕೆಲ ವೃತ್ತಗಳಲ್ಲಿ ಕಾಂಗ್ರೆಸ್ ಮುಖಂಡರು ಕೇಂದ್ರ ಸರ್ಕಾರದ ಜನವಿರೋಧಿ ಹಾಗೂ ರೈತವಿರೋಧಿ ನೀತಿಗಳು, ಬೆಲೆ ಏರಿಕೆಯನ್ನು ಖಂಡಿಸಿ, ಕೇಂದ್ರದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಪ್ರಧಾನಿ ಮೋದಿ ನೇತೃತ್ವದ ಸರ್ಕಾರ ನೀಡಿದ ಉದ್ಯೋಗ ಸೃಷ್ಟಿ, ಸ್ಮಾರ್ಟ್ ಸಿಟಿ ನಿರ್ಮಾಣ, ಕಪ್ಪು ಹಣ ವಾಪಸ್ ತರುವುದಾಗಿ ದೊಡ್ಡ ಭಾಷಣಗಳನ್ನು ಮಾಡಿ, ಇಂದು ಭ್ರಷ್ಟಾರಿಗಳನ್ನು ಜೈಲಿನಲ್ಲಿ ಹಾಕುತ್ತೇವೆ ಎಂದು ಹೇಳಿದ ಮೋದಿ ಹಾಗೂ ಶಾ ಅವರು ಭ್ರಷ್ಟಾಚಾರ ಆರೋಪ ಹೊತ್ತ ಸಾಲು, ಸಾಲು ನಾಯಕರನ್ನು ಬಿಜೆಪಿ ಸೇರ್ಪಡೆ ಮಾಡಿಕೊಳ್ಳುತ್ತಿರುವುದು ವಿಪರ್ಯಾಸ ಎಂದರು.

ಶಾಸಕ ಜಿ.ಎಸ್. ಪಾಟೀಲ, ಮುಖಂಡರಾದ ಶಿವರಾಜ ಘೋರ್ಪಡೆ, ಸಿದ್ದಪ್ಪ ಬಂಡಿ, ಎಚ್.ಎಸ್. ಸೋಂಪುರ, ರಫೀಕ್ ತೋರಗಲ್, ಪ್ರಶಾಂತ ರಾಠೋಡ, ಚಂಬಣ್ಣ ಚವಡಿ, ಎ.ಡಿ. ಕೋಲಕಾರ, ಶಶಿಧರ ಹೂಗಾರ, ಬಿ.ಎಸ್. ಶೀಲವಂತರ, ಶರಣಪ್ಪ ಚಳಗೇರಿ, ಯಲ್ಲಪ್ಪ ಬಂಕದ, ಮುತ್ತಣ್ಣ ಮ್ಯಾಗೇರಿ, ಶ್ರೀಧರ ಬಿದರಳ್ಳಿ, ಶ್ರೀಧರ ಗಂಜಿಗೌಡರ, ಇಮಾಮಸಾಬ ಬಾಗವಾನ, ಶಶಿಧರ ವಕ್ಕಲರ, ಸಿದ್ದು ಗೊಂಗಡಶೆಟ್ಟಿಮಠ, ತುಳಸಪ್ಪ ಸುಳ್ಳದ ಸೇರಿ ಹಲವು ಮುಖಂಡರಿದ್ದರು.

## ತವರು ನೆಲದಲ್ಲಿ ಗಡ್ಡದೇವರಮಠ ಪ್ರಚಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ-ಗದಗ ಲೋಕಸಭಾ ಚುನಾವಣೆಯ ಪ್ರಚಾರ ಕಾರ್ಯಗಳು ನಡೆಯುತ್ತಿದ್ದು, ಮತದಾನಕ್ಕೆ ಕ್ಷಣಗಣನೆ ಶುರುವಾಗಿರುವ ಹಿನ್ನೆಲೆಯಲ್ಲಿ ಹಾವೇರಿ-ಗದಗ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ತಮ್ಮ ತವರು ನೆಲದಲ್ಲಿ ಶುಕ್ರವಾರ ಪ್ರಚಾರ ನಡೆಸಿದರು.



ಅಭ್ಯರ್ಥಿ ಆನಂದಸ್ವಾಮಿ ಪಕ್ಷದ ಮುಖಂಡರ ಜೊತೆ-ಗೆ ತೆರೆದ ವಾಹನದಲ್ಲಿ ಸಾಗಿ ಬರುತ್ತಿದ್ದರೆ, ತಂದೆ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ರೋಡ್ ಶೋನಲ್ಲಿ ಕಾಲ್ನಡಿಗೆಯಲ್ಲಿಯೇ ಸಾಗಿದರು. ಆನಂದಸ್ವಾಮಿ ಗಡ್ಡದೇವರಮಠರ ತಾಯಿ ಜಯಲಕ್ಷ್ಮೀ ಗಡ್ಡದೇವರಮಠ ಮಹಿಳಾ ಬೆಂಬಲಿಗರೊಂದಿಗೆ ಕ್ಷೇತ್ರದಲ್ಲಿ ನಿರಂತರ ಪ್ರಚಾರದಲ್ಲಿ ತೊಡಗಿದ್ದು, ನಿತ್ಯ ನೂರಾರು ಕಿ.ಮೀಗಳ ಪ್ರವಾಸ ಮಾಡುತ್ತಾ ಮತದಾರರ ಮನವೊಲಿಸುವ ಕಾರ್ಯ ಮಾಡುತ್ತಿದ್ದಾರೆ. ಶುಕ್ರವಾರ ನಡೆದ ಬೃಹತ್ ರೋಡ್ ಶೋನಲ್ಲಿ ಜಯಲಕ್ಷ್ಮೀಯವರು ಬಿಸಿಲಿನ ಶಾಖದ ನಡುವೆಯೂ ಜನರೊಂದಿಗೆ ಸಾಗುತ್ತ ಬಂದರು.

## ಪ್ರಜ್ವಲ್ ರೇವಣ್ಣ ಪ್ರಕರಣದ ಸಮಗ್ರ ತನಿಖೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹಾಸನದಲ್ಲಿ ಪ್ರಜ್ವಲ್ ರೇವಣ್ಣ ಸಾವಿರಾರು ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ನಡೆಸಿ, ಆ ನೀಚ ಕೃತ್ಯಗಳನ್ನು ಚಿತ್ರೀಕರಣ ಮಾಡಿಕೊಂಡಿರುವದಾಗಿ ಸಂತ್ರಸ್ತ ಮಹಿಳೆಯರೇ ಆರೋಪಿಸಿ ದೂರು ನೀಡಿದ್ದಾರೆ. ಈ ನೀಚ ಕೃತ್ಯದಲ್ಲಿ ಜೆಡಿಎಸ್ ಹಿರಿಯ ನಾಯಕ ರೇವಣ್ಣ ಕೂಡ ಭಾಗಿಯಾಗಿರುವ ಆರೋಪ ಮಾಡಲಾಗಿದೆ. ಪ್ರಧಾನಿ ಮೋದಿಯವರು ಈ ಬಗ್ಗೆ ಒಂದೇ ಒಂದು ಮಾತನ್ನೂ ಆಡಿಲ್ಲ ಏಕೆ ಎಂದು ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಸರ್ಕಾರದ ನಡವಳಿಕೆಯನ್ನು ತೀವ್ರವಾಗಿ ಖಂಡಿಸಿದೆ.

ಈ ಬಗ್ಗೆ ನಗರದಲ್ಲಿ ಪ್ರತಿಭಟನೆ ನಡೆಸಿದ ಎಸ್‌ಡಿಪಿಐ ಕಾರ್ಯಕರ್ತರು, ರಾಜ್ಯ ಸರ್ಕಾರ ಈ ಪ್ರಕರಣವನ್ನು ತನಿಖೆ ಮಾಡಲು ಖಖಖ ನೇಮಿಸಿರುವುದನ್ನು ಎಸ್.ಡಿ.ಪಿ.ಐ ಪಕ್ಷ ಸ್ವಾಗತ್ತಿಸುತ್ತದೆ. ಮಹಿಳಾ ಆಯೋಗ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಈ ಪ್ರಕರಣದಲ್ಲಿ ನೊಂದ, ಶೋಷಣೆಗೆ ಒಳಗಾದ ಹೆಣ್ಣುಮಕ್ಕಳಿಗೆ ನ್ಯಾಯ ಒದಗಿಸಿಕೊಡಲು ಮುಂದಾಗಿರುವುದೂ ಸ್ವಾಗತಾರ್ಹ. ಆದಷ್ಟು ಬೇಗ ತನಿಖೆ ಮುಕ್ತಾಯಗೊಳಿಸಿ ಇಂತಹ ನೀಚ ಕೃತ್ಯದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಉಸ್ತುವಾರಿ ರಂಜಾನ್ ಕಡಿವಾಳ್, ಜಿಲ್ಲಾಧ್ಯಕ್ಷ ಬಿಲಾಲ ಗೋಕಾವಿ, ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಕಾರ್ಯದರ್ಶಿ ಇರ್ಫಾನ್ ಗುಳಗುಂದಿ, ಖಜಾಂಚಿ ಮುಜಾಹಿದ್ ಕಣಕೇನ್ನವರ್, ಅನ್ವರ್ ಮುಲ್ಲಾ, ನವೀದ್ ಕಮಾನಗಾರ, ಯಾಸೀನ್ ಹುಬ್ಬಳ್ಳಿ, ಮುಸ್ತಾಕ್ ಕಟ್ಟಿಮನಿ, ಮುಸ್ತಾಕ್ ಹೊಸಮನಿ, ಸಾಧಿಕ್ ಬುರಬುರೆ, ಮುಕ್ತಾರ್ ಮೌಲ್ವಿ ಭಾಗವಹಿಸಿದ್ದರು.




### ಬಹಿರಂಗ ಸಭೆಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಬಿ.ಎಸ್. ಯಡಿಯೂರಪ್ಪ

## ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿರುವ ಕಾಂಗ್ರೆಸ್ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಆರೋಪಿಸಿದರು.

ಇಲ್ಲಿನ ರೋಣ ರಸ್ತೆಯ ಎಪಿಎಂಸಿ ಎದುರಿನ ಪುರಸಭೆ ಬಯಲು ಜಾಗೆಯಲ್ಲಿ ಗುರುವಾರ ಸಂಜೆ ಹಾವೇರಿ-ಗದಗ ಲೋಕಸಭಾ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರವಾಗಿ ಬಹಿರಂಗ ಸಭೆ ಉದ್ಘಾಟಿಸಿ, ಮತಯಾಚಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ರಾಜ್ಯದಲ್ಲಿ ವಿಷದ ಬಿಜ ಬಿತ್ತಿ, ಜನರನ್ನು ಒಡೆದಾಳುವ ನೀತಿಯನ್ನು ಅನುಸರಿಸಿ ಅಧಿಕಾರಕ್ಕೆ ಬರುವ ಕನಸನ್ನು ಕಾಣುತ್ತಿದೆ. ಆದರೆ ಆ ಕನಸು ಯಾವುದೇ ಕಾರಣಕ್ಕೂ ನನಸಾಗುವದಿಲ್ಲ. ರಾಜ್ಯದಲ್ಲಿನ ಕಾಂಗ್ರೆಸ್ ಜನರ ವಿಶ್ವಾಸವನ್ನು ಕಳೆದುಕೊಂಡ ಪರಿಣಾಮ ಪಾಲಿಗೆ ಇಲ್ಲದಂತಾಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರಾಜ್ಯದಲ್ಲಿ ಬರಗಾಲ ಎದುರಾಗಲಿದೆ. ನಾವು ಅಧಿಕಾರದಲ್ಲಿದ್ದರೆ ಜಲಾಶಯಗಳು ತುಂಬಿ ತುಳಕುತ್ತವೆ. ರೈತರು ನೆಮ್ಮದಿ ಹಾಗೂ ಸ್ವಾಭಿಮಾನದ ಬದುಕು ಸಾಗಿಸಲು ಅವಕಾಶ ಮಾಡಲು ರೈತರ ಸಂಪೂರ್ಣ ಸಾಲಮನ್ನಾ ಮಾಡಿ. ಇಲ್ಲದಿದ್ದರೆ ನಿಮ್ಮ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಪ್ರತಿಭಟಿಸುವ ಶಕ್ತಿ ನನ್ನಲ್ಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.




ರಾಜ್ಯದಲ್ಲಿ ಕಾಂಗ್ರೆಸ್ ವ್ಯಾಪಕ ಭ್ರಷ್ಟಾಚಾರ, ಲೂಟಿಯಲ್ಲಿ ತೊಡಗಿದೆ. ಕಾಂಗ್ರೆಸ್‌ನವರು ಯಾವ ಮುಖವನ್ನು ಇಟ್ಟುಕೊಂಡು ಜನರ ಮತ ಕೇಳುತ್ತಾರೆ? ಹಣ, ಹೆಂಡ ಹಾಗೂ ಅಧಿಕಾರದ ಬಲದಿಂದ ಚುನಾವಣೆ ಗೆಲ್ಲುತ್ತೇವೆ ಎನ್ನುವ ಅಹಂನಲ್ಲಿ ಸಿದ್ದರಾಮಯ್ಯ ಸರ್ಕಾರವಿದೆ. ಲೋಕಸಭಾ ಚುನಾವಣೆ ಬಳಿಕ ದೇಶದಲ್ಲಿ ಕಾಂಗ್ರೆಸ್ ಧೂಳಿಪಟವಾಗಲಿದ್ದು, ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್‌ನಿಂದ ನಿಲ್ಲಲು ಅಭ್ಯರ್ಥಿಗಳು ಸಿಗದ ಸ್ಥಿತಿ ಬರಲಿದೆ. ರಾಜ್ಯದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ ಎಂದರು.

ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ದೇಶದ ಭವಿಷ್ಯ ಅಡುಗಿದೆ. ರೋಣದಲ್ಲಿ ನಾನು ಸೋತಿದ್ದೇನೆ, ಇಲ್ಲಿ ಏನಾದರೂ ತೊಂದರೆ ಆದರೆ ರೋಣಕ್ಕೆ ಮಾತ್ರವಾಗಲಿದೆ. ಆದರೆ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲ್ಲದಿದ್ದರೆ ದೇಶಕ್ಕೆ ಅಪಾಯ ಎದುರಾಗಲಿದೆ ಎಂದರು.

ಮಾಜಿ ಸಿಎಂ, ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಮಾತನಾಡಿ, ಕಾಂಗ್ರೆಸ್‌ನ ಒಬ್ಬ ಶಾಸಕ ಕಾಂಗ್ರೆಸ್‌ಗೆ ಮತ ಹಾಕದಿದ್ದರೆ ಶಾಶ್ವತವಾಗಿ ವಿದ್ಯುತ್ ಕಟ್ ಮಾಡುವದಾಗಿ ಹೇಳಿದ್ದಾನೆ. ವಿದ್ಯುತ್ ಅವರ ಅಪ್ಪನ ಮನೆಯದ್ದಲ್ಲ. ಇವರು ಪ್ರಧಾನಮಂತ್ರಿಗಳ ಆಯುಷ್ಯದ ಬಗ್ಗೆ ಮಾತನಾಡುವ ಕೆಳಮಟ್ಟಕ್ಕೆ ಕುಸಿದಿದ್ದಾರೆ. ಹಿಂದುಳಿದ ವರ್ಗಗಳಿಗೆ ನ್ಯಾಯ ನೀಡುತ್ತೇವೆ ಎನ್ನುವ ಕಾಂಗ್ರೆಸ್ ನಾಯಕರ ಕೈಗೆ ವರದಿ ಸಿಕ್ಕು 3 ತಿಂಗಳು ಗತಿಸಿವೆ. ಆದರೆ ವರದಿ ಬಿಡುಗಡೆ ಮಾಡಿಲ್ಲ ಎಂದರು.

ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಎಂ.ವಾಯ್. ಮುಧೋಳ, ನಿಂಗಪ್ಪ ಕೆಂಗಾರ, ಮುತ್ತಣ್ಣ ಕಡಗದ, ಕನಕಪ್ಪ ಅರಳಿಗಿಡದ, ಸಿದ್ದಣ್ಣ ಬಳಿಗೇರ, ಬಸವರಾಜ ಬಂಕದ, ಉಮೇಶ ಮಲ್ಲಾಪೂರ, ಬಿ.ಎಂ. ಸಜ್ಜನರ, ಕಾಂತಿಲಾಲ ಬನ್ಸಾಲಿ, ರಾಜೇಂದ್ರ ಘೋರ್ಪಡೆ, ಮುದಿಯಪ್ಪ ಮುಧೋಳ, ಲೀಲಾ ಸವಣೂರ, ಶ್ರೀನಿವಾಸ ಸವದಿ, ಮುತ್ತಣ್ಣ ಚೆಟ್ಟೇರ, ಉಮೇಶ ಚನ್ನುಪಾಟೀಲ ಸೇರಿ ಇತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka